# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 299
Volume - 01 Issue - 299

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 20–06–2024 ಗುರುವಾರ
Date: 20-06-2024 Thursday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



**ಒಳಪುಟದ ಸುದ್ದಿಗಳು**

ಚಿಕ್ಕಾಲಘಟ್ಟ ಗ್ರಾಮದಲ್ಲಿ ಜನಸ್ಪಂದನ ಕಾರ್ಯಕ್ರಮ 2

ಬರ, ಹವಾಮಾನ ವೈಪರೀತ್ಯ ತಡೆಯಲುಮರಗಿಡ ಬೆಳೆಸಿ 3

ಕರ್ನಾಟಕ ಮಾಧ್ಯಮ ಮಹಾಒಕ್ಕೂಟದ ಜಿಲ್ಲಾಧ್ಯಕ್ಷರಾಗಿ ಜೀಯಾವುಲ್ಲಾ ಆಯ್ಕೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಜನಪ್ರತಿನಿಧಿಗಳು ಸರ್ಕಾರಿ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸೋಣ

» **ಚಿತ್ರದುರ್ಗ**

ಚುನಾಯಿತ ಪ್ರತಿನಿಧಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಸಮನ್ವಯತೆಯಿಂದ ಉತ್ತಮವಾಗಿ ಕಾರ್ಯನಿರ್ವಹಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಒಳ್ಳೆಯ ಹೆಸರು ತರುವ ಕೆಲಸ ಮಾಡೋಣ ಎಂದು ನೂತನ ಸಂಸದ ಗೋವಿಂದ ಕಾರಜೋಳ ಆಶಯ ವ್ಯಕ್ತಪಡಿಸಿದರು.

ಸಂಸದರಾಗಿ ಆಯ್ಕೆಯಾದ ಬಳಿಕ ಇದೇ ಮೊದಲ ಬಾರಿಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ವಿವಿಧ ಇಲಾಖಾ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಚುನಾಯಿತ ಪ್ರತಿನಿಧಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಆಡಳಿತ ಎಂಬ ಎತ್ತಿನ ಬಂಡಿ ಎರಡು ಗಾಲಿಗಳಿದ್ದಂತೆ, ಎರಡೂ ಚಕ್ರಗಳು ಸಮನಾಗಿ ಸಾಗಿದಾಗ ಮಾತ್ರ ಬಂಡಿ ಸುಗಮವಾಗಿ ಸಾಗಲು ಸಾಧ್ಯ. ಅದೇ ರೀತಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಿದಾಗ ಮಾತ್ರ ಆಡಳಿತ ಸುಗಮ ಹಾಗೂ ಉತ್ತಮವಾಗಿ ನಡೆಸಲು ಸಾಧ್ಯವಾಗುತ್ತದೆ. ಹೀಗಾಗಿ ಎಲ್ಲ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಒಟ್ಟಾಗಿ ಸಮನ್ವಯತೆಯಿಂದ ಕೆಲಸ ಮಾಡೋಣ, ರಾಜ್ಯ ಹಾಗೂ ಕೇಂದ್ರ ಸರ್ಕಾರಕ್ಕೆ ಒಳ್ಳೆಯ ಹೆಸರು ತರುವ ಕೆಲಸ ಮಾಡೋಣ. ಇದಕ್ಕೆ ಎಲ್ಲ ಅಧಿಕಾರಿಗಳ ಸಹಕಾರ ಕೋರುತ್ತೇನೆ ಎಂದು ಆಶಯ ವ್ಯಕ್ತಪಡಿಸಿದ ಸಂಸದರು, ಲೋಕಸಭೆ ಚುನಾವಣೆಯನ್ನು ಎಲ್ಲ ಅಧಿಕಾರಿಗಳು ಒಟ್ಟುಗೂಡಿ ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ನಡೆಸಿಕೊಟ್ಟಿದ್ದಾರೆ. ಅಲ್ಲದೆ, ಸರ್ಕಾರಿ ನೌಕರರು ಬಹಳಷ್ಟು ಸಂಖ್ಯೆಯಲ್ಲಿ ನಮಗೆ ಮತ ಚಲಾಯಿಸಿದ್ದು, ಇದಕ್ಕಾಗಿ ಎಲ್ಲರಿಗೂ ಧನ್ಯವಾದಗಳನ್ನು ಸಲ್ಲಿಸುವುದಾಗಿ ಹೇಳಿದರು.





ಜಿಲ್ಲೆಯಲ್ಲಿ 3.21 ಲಕ್ಷ ಹೆ. ಪ್ರದೇಶದಲ್ಲಿ ಮುಂಗಾರು ಬಿತ್ತನೆಯಾಗುವ ಗುರಿ ಇದ್ದು, ಈ ಬಾರಿ ಉತ್ತಮವಾಗಿ ಮಳೆಯಾಗಿದೆ. 143 ಮಿ.ಮೀ. ವಾಡಿಕೆ ಮಳೆಯ ಬದಲಿಗೆ 214 ಮಿ.ಮೀ. ಮಳೆಯಾಗಿ, ಶೇ. 51 ರಷ್ಟು ಹೆಚ್ಚು ಮಳೆಯಾದಂತಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಎರಡು ಗ್ರಾಮಗಳಲ್ಲಿ ಮಾತ್ರ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ ಜಿಲ್ಲೆಯಲ್ಲಿ ಮುಸುಕಿನ ಜೋಳ, ಶೇಂಗಾ, ರಾಗಿ ಮುಂತಾದ ಬೆಳೆಗಳನ್ನು ಹೆಚ್ಚು ಬೆಳೆಯುತ್ತಾರೆ. ಬಿತ್ತನೆ ಬೀಜ ಹಾಗೂ ಗೊಬ್ಬರದ ಯಾವುದೇ ಕೊರತೆ ಇಲ್ಲ. ಸದ್ಯ 18 ಸಾವಿರ ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನು ಇದೆ. ಡಿಎಪಿ ಗೊಬ್ಬರಕ್ಕೆ ಬೇಡಿಕೆ ಬರುತ್ತಿದ್ದು, 3500 ಟನ್ ಡಿಎಪಿ ಗೊಬ್ಬರ ಪೂರೈಕೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸಬ್ಸಿಡಿಯಲ್ಲಿ ಕೃಷಿ ಉಪಕರಣಗಳ ಖರೀದಿಗೆ ಈ ವರ್ಷ ಸುಮಾರು 25 ಕೋಟಿ ರೂ. ಅನುದಾನ ಬೇಕಾಗುತ್ತದೆ ಎಂದು ಜಂಟಿಕೃಷಿ ನಿರ್ದೇಶಕ ಮಂಜುನಾಥ್ ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದರು, ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಹೆಚ್ಚಿನ ಅನುದಾನ ತರಿಸಬೇಕು, ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಎಸ್‌ಸಿ, ಎಸ್‌ಟಿ ರೈತರು ಇದ್ದಾರೆ. ಹೀಗಾಗಿ ಬೇಡಿಕೆ ಪಟ್ಟಿ ತಯಾರಿಸಿ ಸಲ್ಲಿಸಿದಲ್ಲಿ, ಜಿಲ್ಲೆಗೆ ಹೆಚ್ಚಿನ ಅನುದಾನ ಕೊಡಿಸಲು ಯತ್ನಿಸುತ್ತೇನೆ. ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಬಿತ್ತನೆ ಬೀಜ ಹಾಗೂ ಗೊಬ್ಬರದ ಕೊರತೆ ಆಗದಂತೆ ನೋಡಿಕೊಳ್ಳಬೇಕು, ಕಳಪೆ ಬಿತ್ತನೆ ಬೀಜ ಮಾರಾಟ ಆಗದಂತೆ ಎಚ್ಚರ ವಹಿಸಬೇಕು, ಕೃಷಿ ಉತ್ಪನ್ನಗಳ ಮಾರಾಟ ದರದಲ್ಲಿ ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ವೈದ್ಯರ ಕೊರತೆ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೊರಗುತ್ತಿಗೆ ಆಧಾರದಲ್ಲಿ ವೈದ್ಯರನ್ನು ನೇಮಿಸಬೇಕು, ಅಲ್ಲಿಯವರೆಗೂ ಕನಿಷ್ಟ ಪಕ್ಷ ಆಯುಷ್ ವೈದ್ಯರುಗಳನ್ನಾದರು ನಿಯೋಜಿಸಬೇಕು. ಪ್ರಯೋಗಾಲಯ ತಜ್ಞರು, ಎಕ್ಸ್‌ರೇ ತಜ್ಞರು ಮುಂತಾದವರ ಕೊರತೆಯನ್ನು ನೀಗಿಸಿ, ಆಸ್ಪತ್ರೆಗಳಲ್ಲಿರುವ ಯಂತ್ರೋಪಕರಣಗಳು ಸದ್ಬಳಕೆಯಾಗುವಂತೆ ನೋಡಿಕೊಳ್ಳಬೇಕು, ಔಷಧಿಗಳ ಕೊರತೆಯಾಗಬಾರದು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೇಶದಲ್ಲಿ ಎಲ್ಲ ಮನೆ ಮನೆಗೂ ಸುರಕ್ಷಿತ ಕುಡಿಯುವ ನೀರು ಪೂರೈಸುವ ಜಲಜೀವನ್ ಮಿಷನ್ ಯೋಜನೆಯನ್ನು ಜಾರಿಗೊಳಿಸುವ ಮೂಲಕ ಪ್ರಧಾನಮಂತ್ರಿಗಳು ಕ್ರಾಂತಿಯನ್ನೇ ಮಾಡಿದ್ದಾರೆ. ಇಂತಹ ಯೋಜನೆ ರೂಪಿಸುವಲ್ಲಿ ತಮ್ಮ ಪಾತ್ರ ಬಹಳಷ್ಟಿದೆ ಎಂದು ಸ್ಮರಿಸಿದ ಸಂಸದರು, ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಹಲಗಲಿ ಎಂಬ ಸುಮಾರು 8 ಸಾವಿರ ಜನಸಂಖ್ಯೆ ಹೊಂದಿರುವ ದೊಡ್ಡ ಊರಿನಲ್ಲಿ ಕುಡಿಯುವ ನೀರಿನ ಬಹಳಷ್ಟು ಸಮಸ್ಯೆ ಇತ್ತು, ಈ ಊರಿನ ಯುವಕರಿಗೆ ಯಾರೂ ಕೂಡ ಹೆಣ್ಣು ಕೊಟ್ಟು ಮದುವೆ ಮಾಡಲೂ ಮನಸ್ಸು ಮಾಡುತ್ತಿರಲಿಲ್ಲ. ಅಷ್ಟೊಂದು ಕಠಿಣ ಪರಿಸ್ಥಿತಿ ನಿರ್ಮಾಣವಾಗಿತ್ತು. ಹೀಗಿರುವಾಗ, ಬಹುಗ್ರಾಮ ಕುಡಿಯುವ ನೀರು ಯೋಜನೆ ಜಾರಿಗೊಳಿಸಿ, ಮನೆಗಳಿಗೆ ನಳ ಸಂಪರ್ಕ ಕಲ್ಪಿಸಿ, ಈ ಊರಿನ ಎಲ್ಲ ಮನೆಗಳಿಗೆ ಉತ್ತಮ ಕುಡಿಯುವ ನೀರು ಪೂರೈಸಲು ಸಾಧ್ಯವಾಯಿತು, ನಳ ಸಂಪರ್ಕಕ್ಕೆ ಮೀಟರ್ ಅಳವಡಿಸಿದ್ದರಿಂದ ಶೇ. 70 ರಷ್ಟು ನೀರು ವ್ಯರ್ಥವಾಗಿ ಹರಿದು ಹೋಗುವುದನ್ನು ತಡೆಗಟ್ಟಿದಂತಾಯಿತು. ಈ ಯೋಜನೆ ಬಗ್ಗೆ ಕೇಂದ್ರ ಸರ್ಕಾರದ ತಂಡ ಆಗಮಿಸಿ, ವೀಕ್ಷಿಸಿ, ಯೋಜನೆ ಯಶಸ್ವಿಯಾಗಿದ್ದನ್ನು ಕಂಡು ಕೊಂಡಿತು. ತಂಡದಿಂದ ವರದಿ ಪಡೆದ ಕೇಂದ್ರ ಸರ್ಕಾರ ಬಳಿಕ ಈ ಯೋಜನೆಯಿಂದ ಸ್ಫೂರ್ತಿ ಪಡೆದು, ಜಲಜೀವನ್ ಮಿಷನ್ ನಂತಹ ಬೃಹತ್ ಯೋಜನೆ ಜಾರಿಗೊಳಿಸಲು ಕಾರಣವಾಯಿತು ಎಂದು ಖುಷಿಯಿಂದ ವಿಷಯ ಹಂಚಿಕೊಂಡರು.

ಪುಟ ↘ 2

**ಫಾಸ್ಟ್ ನ್ಯೂಸ್**

## ಜಿಲ್ಲಾ ಮಟ್ಟದ ಪ್ರಬಂಧ ಹಾಗೂ ಚರ್ಚಾ ಸ್ಪರ್ಧೆ

» **ಚಿತ್ರದುರ್ಗ**

ಸಹಕಾರಇಲಾಖೆ,ಕರ್ನಾಟಕರಾಜ್ಯಮಹಾಮಂಡಳಿ ಹಾಗೂ ಜಿಲ್ಲಾ ಸಹಕಾರ ಯೂನಿಯನ್ ಇವರ ಸಂಯುಕ್ತಾಶ್ರಯದಲ್ಲಿ ಜುಲೈ 16ರಂದು ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಸಂಪಿಗೆ ಸಿದ್ದೇಶ್ವರ ಪೌಢಶಾಲೆಯಲ್ಲಿ ಸಹಕಾರ ವಿಷಯದ ಕುರಿತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಹಾಗೂ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಚರ್ಚಾ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ "ಶಾಲಾ ಕಾಲೇಜುಗಳ ಪಠ್ಯ ವಿಷಯಗಳಲ್ಲಿ ಸಹಕಾರಿ ವಿಷಯ ಅಳವಡಿಕೆ" (Introduction Of Subject On Co-Operation In The Syllabus Of Schools And Colleges) ಕುರಿತು ಪ್ರಬಂಧ ಸ್ಪರ್ಧೆ ಹಾಗೂ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ "ಯುವ ನಾಯಕತ್ವದಿಂದ ಮಾತ್ರವೇ ಸಹಕಾರಿ ವ್ಯವಸ್ಥೆ ಬಲಾಢ್ಯಗೊಳ್ಳಬಲ್ಲದು" (Young Leadership Can Only Strengthen The Cooperative Movement) ಎಂಬ ವಿಷಯ ಕುರಿತು ಪರ ಮತ್ತು ವಿರೋದ ಚರ್ಚಾ ಸ್ಪರ್ದೆ ಏರ್ಪಡಿಸಲಾಗಿದೆ. ಜಿಲ್ಲೆಯ ಪ್ರೌಢಶಾಲೆ ಹಾಗೂ ಕಾಲೇಜಿನ ಇಬ್ಬರು ವಿದ್ಯಾರ್ಥಿಗಳನ್ನು ಕಳುಹಿಸಿಕೊಡಲು ವಿನಂತಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಚಿತ್ರದುರ್ಗ ಜಿಲ್ಲಾ ಯೂನಿಯನ್, ಸಹಕಾರ ಭವನ, ಬಿ.ಎಲ್.ಗೌಡ ಲೇ ಔಟ್, ಕೆಳಗೋಟೆ, ಚಿತ್ರದುರ್ಗ ದೂರವಾಣಿ ಸಂಖ್ಯೆ 9663100410, 9980803050, 9986814941 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## 21ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ

» **ಚಿತ್ರದುರ್ಗ**

ಆಯುಷ್ ಮಂತ್ರಾಲಯ, ಆಯುಷ್ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ವತಿಯಿಂದ ಸ್ವಂತ ಹಾಗೂ ಸಮಾಜಕ್ಕಾಗಿ ಯೋಗ "10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಇದೇ ಜೂನ್ 21ರಂದು ಬೆಳಿಗ್ಗೆ 7 ಗಂಟೆಗೆ ಚಿತ್ರದುರ್ಗ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ.ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರೀಕರ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್ ಹಾಗೂ ನಗರಸಭೆ ಸದಸ್ಯರು ಹಾಗೂ ಚುನಾಯಿತ ಜನಪ್ರತಿನಿಧಿಗಳು ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಆಯುಷ್ ಇಲಾಖೆ ಆಯುಕ್ತ ಶ್ರೀನಿವಾಸುಲು, ಯೋಗ, ಪ್ರಕೃತಿ ಚಿಕಿತ್ಸೆ ಉಪನಿರ್ದೇಶಕ ಡಾ.ಹರೀಶ್ ಬಾಬು ಭಾಗವಹಿಸುವರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ.ಸಿಇಒ ಎಸ್.ಜೆ.ಸೋಮಶೇಖರ್, ಎಸ್ಪಿ ಧರ್ಮೇಂಧರ್ ಕುಮಾರ್ ಮೀನಾ ಉಪಸ್ಥಿತರಿರುವರು.

**ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸೋಲಿನ ಬಗ್ಗೆ ಪಕ್ಷದ ಆತ್ಮವಿಮರ್ಶೆ ಸಭೆ**

## ಶಿಕ್ಷಕರ ಕ್ಷೇತ್ರ ಗೆಲುವು ಸಾಧಿಸಿದ ಶ್ರೀನಿವಾಸ್‌ಗೆ ಅಭಿನಂದನೆ

» **ಚಳ್ಳಕೆರೆ**


ರಾಷ್ಟ್ರದ ಇತಿಹಾಸದಲ್ಲಿ ಲಕ್ಷಾಂತರ ಬಡಜನರ ಹಿತಕ್ಕಾಗಿ ಶ್ರಮಿಸಿದ ಪಕ್ಷ ಕಾಂಗ್ರೆಸ್. ಸೋಲು ಮತ್ತು ಗೆಲುವನ್ನು ಸಮಾನಾಂತರವಾಗಿ ಸ್ವೀಕರಿಸಿ ಎಲ್ಲರಿಗೂ ಸಾಮಾಜಿಕ ನ್ಯಾಯವನ್ನು ಒದಗಿಸಿದ ಕಾಂಗ್ರೆಸ್ ಪಕ್ಷ ಇಂದು ರಾಷ್ಟ್ರ ಮತ್ತು ರಾಜ್ಯದಲ್ಲಿ ತನ್ನ ಶಕ್ತಿ ಹೆಚ್ಚಿಸಿಕೊಂಡಿದೆ. ಲೋಕಸಭಾ ಚುನಾವಣೆಯ ಸೋಲು, ಆಗ್ನೇಯ ಶಿಕ್ಷಕರ ಕ್ಷೇತ್ರದ ಗೆಲುವು ಕಾಂಗ್ರೆಸ್ ಪಕ್ಷಕ್ಕೆ ಆತ್ಮವಿಮರ್ಶೆಯ ಜೊತೆಗೆ ಹೊಸ ಆಯಾಮವನ್ನು ಸೃಷ್ಠಿಸಿದೆ ಎಂದು ಕ್ಷೇತ್ರದ ಶಾಸಕ, ರಾಜ್ಯ ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಬುಧವಾರ ನಗರದ ಛೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಲೋಕಸಭಾ ಚುನಾವಣೆ ಸೋಲಿನ ಬಗ್ಗೆ ಸಮಾಲೋಚನೆ ಹಾಗೂ ಆಗ್ನೇಯಶಿಕ್ಷಕರ ಕ್ಷೇತ್ರದ ಅಭ್ಯರ್ಥಿಗೆ ಅಭಿನಂದಿಸುವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



## ರೇಣುಕಾ ಸ್ವಾಮಿ ಹತ್ಯೆ: ತಪ್ಪು ಮಾಡಿದವರಿಗೆ ಶಿಕ್ಷೆಯಾಗಬೇಕು

» **ಹೊಸದುರ್ಗ**

ರೇಣುಕಾಸ್ವಾಮಿ ಹತ್ಯೆ ಮಾಡಿರುವುದು ಕ್ರೂರ ಮನಸ್ಸಿನ ಪ್ರತಿಕಾರ.



ಯಾವ ಮನುಷ್ಯನೂ ಸಹ ಇಂತಹ ಕೆಲಸ ಮಾಡುವುದಿಲ್ಲ. ಈ ಘಟನೆ ಬಗ್ಗೆ ಪೋಲಿಸರ ಜಾಣ್ಮೆ, ಕಾರ್ಯವೈಖರಿ ಮೆಚ್ಚುವಂತದ್ದು. ಈ ಘಟನೆಗೆ ಸಂಬಂಧಿಸಿದಂತೆ ಯಾರೇ ತಪ್ಪು ಮಾಡಿದರೂ ಸರಿ, ಕಠಿಣ ಶಿಕ್ಷೆಯಾಗಬೇಕು. ಅದು ಮತ್ತೊಬ್ಬರಿಗೆ ಎಚ್ಚರಿಕೆ ನೀಡುವಂತಿರಬೇಕು ಎಂದು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲೂಕಿನ ಸಾಣೇಹಳ್ಳಿಯ ಶ್ರೀಮಠದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಶ್ರೀಗಳು ಚಲನಚಿತ್ರದ ನಟ ನಟಿಯರನ್ನು ಅಭಿಮಾನಿಗಳು ದೇವರ ರೀತಿಯಲ್ಲಿ ಭಾವಿಸುತ್ತಾರೆ.

ಪುಟ ↘ 3

**ಪ್ರಮುಖ ಸುದ್ದಿ**

# ತಾಂತ್ರಿಕವಾಗಿ ಸೋಲಾಗಿದೆ, ಮಾನಸಿಕವಾಗಿ ಗೆದ್ದಿದ್ದೇನೆ

» **ಚಿತ್ರದುರ್ಗ**

ಸಂಸದನಾಗಲು ಯಾವ ಮಾನದಂಡ ಇದೆ. ಅನಿರೀಕ್ಷಿತ ಫಲಿತಾಂಶದಿಂದ ಬೇಸರ ಮಾಡಿಕೊಳ್ಳುವುದಿಲ್ಲ ಎಂದು ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ನನ್ನ ಕರ್ಮ ಭೂಮಿ. ಬದ್ಧತೆ ಇದೆ. ನನ್ನ ಸೇವೆ ಕ್ಷೇತ್ರದ ಜನತೆಗೆ ಸದಾ ಇರುತ್ತದೆ. ಸೋತೆ ಎಂದು ನಾನು ಭಾವಿಸಿಲ್ಲ. ಜತೆಗೆ ಈ ಬೇಸರವನ್ನು ಕ್ಷೇತ್ರದ ಅಭಿವೃದ್ಧಿಯ ಮೇಲೆ ತೋರಿಸುವುದಿಲ್ಲ ಎಂದರು.



ರಾಜ್ಯದ ಎಲ್ಲ ಸಮೀಕ್ಷೆಗಳಲ್ಲಿ ಚಿತ್ರದುರ್ಗದಲ್ಲಿ ಕಾಂಗ್ರೆಸ್ ಗೆಲ್ಲುತ್ತದೆ ಎನ್ನುವ ವರದಿ ಬಂದಿದ್ದವು. ಬಿಜೆಪಿ ಕೂಡಾ ಚಿತ್ರದುರ್ಗವನ್ನು ಸೋಲುತ್ತೇವೆ ಎಂದು ಮರೆತಿದ್ದರು. ಆದರೆ ಈ ಫಲಿತಾಂಶ ಅಚ್ಚರಿ ಮೂಡಿಸಿದೆ. ಮೂರು ಚುನಾವಣೆ ಎದುರಿಸಿದ್ದೇನೆ. 2014 ರ ಚುನಾವಣೆಗಿಂತ 2019 ರಲ್ಲಿ 1 ಲಕ್ಷ ಹೆಚ್ಚು ಮತ ಪಡೆದಿದ್ದೆ, 2024 ರಲ್ಲೂ 85 ಸಾವಿರಕ್ಕಿಂತ ಹೆಚ್ಚು ಮತ ಬಂದಿವೆ. ತಾಂತ್ರಿಕವಾಗಿ ಸೋಲಾಗಿದೆ. ಮಾನಸಿಕವಾಗಿ ಗೆದ್ದಿದ್ದೇನೆ ಎಂದರು.

ಮತ ಹಾಕಿದ ಚಿತ್ರದುರ್ಗ ಜನರಿಗೆ ನಮನ ಸಲ್ಲಿಸುತ್ತೇನೆ. ಒಬ್ಬ ಸಂಸದ, ಅಭ್ಯರ್ಥಿ ಹೇಗೆ ನಡೆದುಕೊಳ್ಳಬೇಕು ಎನ್ನುವುದು ಯಕ್ಷಪ್ರಶ್ನೆಯಾಗಿದೆ. ಮನೆ ಮಗನಾಗಿದ್ದೆ ಎನ್ನುವುದನ್ನು ಎಲ್ಲರೂ ಹೇಳುತ್ತಾರೆ. ಸೋತವರು ಮತ್ತೆ ಇಲ್ಲಿಗೆ ಬಂದಿಲ್ಲ. ಸೋತಾಗಲೂ ಜಿಲ್ಲೆಯಲ್ಲಿ ಅವಿನಾಭವ ಸಂಬಂಧ ಇಟ್ಟುಕೊಂಡು ಓಡಾಡಿದ್ದೆ. ತಪ್ಪು ಮಾಡಿದ್ದರೆ ಹೇಳಬೇಕು. ಮತ್ತೆ ಈ ರೀತಿಯ ಸೋಲಾಗಿದ್ದಕ್ಕೆ ನೋವಿದೆ ಎಂದು ಬೇಸರಿಸಿದರು.

ಜೆಡಿಎಸ್ ಬಿಜೆಪಿ ಮೈತ್ರಿ ಕೆಲಸ ಮಾಡಿದೆ. ಸಾಮಾಜಿಕ ನ್ಯಾಯದ ಪರವಾಗಿರುವ ಕಾಂಗ್ರೆಸ್ ಒಬ್ಬಂಟಿ ಆಗಿತ್ತು. ಜೆಡಿಎಸ್ ಕಾಂಗ್ರೆಸ್ ಜೊತೆಗೆ ಇದ್ದಾಗ ಪರಿಣಾಮ ಬೀರಲಿಲ್ಲ, ಆದರೆ, ಬಿಜೆಪಿ ಜೊತೆಗೆ ಪರಿಣಾಮಕಾರಿಯಾಗಿ ಕೆಲಸ ಮಾಡಿದೆ. ಉತ್ತರ ಭಾರತದಲ್ಲಿ ಯಾದವ ಸಮಾಜ ಬಿಜೆಪಿ ವಿರುದ್ಧವಾಗಿದೆ. ಆದರೆ, ಕರ್ನಾಟಕದಲ್ಲಿ ಸ್ವಲ್ಪ ಪರವಾಗಿದೆ ಎಂದರು.

ಚುನಾವಣೆ, ಮತಕ್ಕಾಗಿ ಗ್ಯಾರೆಂಟಿ ಜಾರಿಗೊಳಿಸಿದ್ದಲ್ಲ. ಅವುಗಳನ್ನು ನಿಲ್ಲಿಸಬಾರದು ಎನ್ನುವುದು ನನ್ನ ಅಭಿಲಾಷೆ. ಮುಂದುವರೆಯಬೇಕು. ಬದಲಾವಣೆ ಇದ್ದರೆ ಮಾಡಿಕೊಳ್ಳಬೇಕು. ಕಾಡುಗೊಲ್ಲ ಅಭಿವೃದ್ಧಿ ನಿಗಮದ ಗೊಂದಲ ಬಗೆಹರಿಸಿ ಅಧ್ಯಕ್ಷರನ್ನು ಆಯ್ಕೆ ಮಾಡಬೇಕು.

ಪುಟ ↘ 2



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ತಾಂತ್ರಿಕವಾಗಿ ಸೋಲಾಗಿದೆ, ಮಾನಸಿಕವಾಗಿ ಗೆದ್ದಿದ್ದೇನೆ

» ಮೊದಲ ಪುಟದಿಂದ

ಅನಿರೀಕ್ಷಿತ ಫಲಿತಾಂಶವನ್ನು ಜಿಲ್ಲೆಯಲ್ಲಿ ನೋಡಿದ್ದೇವೆ. ರಾಜ್ಯದಲ್ಲಿ ಇನ್ನೂ ನಾಲ್ಕು ವರ್ಷ ಕಾಂಗ್ರೆಸ್ ಸರ್ಕಾರ ಇರುತ್ತದೆ. ಸರ್ಕಾರದ ಸಂಪೂರ್ಣ ಸಹಕಾರ ಇಲ್ಲದೆ ಸಂಸದರು ಏನೂ ಮಾಡಲು ಆಗುವುದಿಲ್ಲ ಎಂದು ತಿಳಿಸಿದರು. ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಕಾರ್ಯಧ್ಯಕ್ಷರಾದ ಕೆ.ಎಂ. ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್ ಕುಮಾರ್, ಮೈಲಾರಪ್ಪ, ಲಕ್ಷ್ಮೀಕಾಂತ್, ಕೆಪಿಸಿಸಿ ವಕ್ತಾರರಾದ ಬಾಲಕೃಷ್ಣ ಯಾದವ್, ಮುಖಂಡರಾದ ಮರುಳಾರಾಧ್ಯ, ಪ್ರಕಾಶ್, ಮುದಸಿರ್ ಭಾಗವಹಿಸಿದ್ದರು.

### ಜನಪ್ರತಿನಿಧಿಗಳು ಸರ್ಕಾರಿ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸೋಣ

» ಮೊದಲ ಪುಟದಿಂದ

ಚಿತ್ರದುರ್ಗ ನಗರಕ್ಕೆ ನಗರಸಭೆಯಿಂದ ಪ್ರಸ್ತುತ ಮೂರ್ನಾಲ್ಕು ದಿನಕ್ಕೆ ಒಮ್ಮೆ ಜನಸಂಖ್ಯೆಗೆ ಅನುಗುಣವಾಗಿ ಕುಡಿಯುವ ನೀರು ಪೂರೈಸುವಂತಾಗಲು ನೀರು ಪೂರೈಕೆ ಪೈಪ್ ಜಾಲವನ್ನು ನವೀಕರಿಸಬೇಕು ಹಾಗೂ ಈಗಿರುವ ಜಾಲವನ್ನುಸುಧಾರಿಸುವ ಕಾಮಗಾರಿ ಮಾಡಬೇಕು. ಶಾಂತಿಸಾಗರದಿಂದ ಜನರಿಗೆ ಪೂರೈಸಲಾಗುತ್ತಿರುವ ನೀರು ಸರಿಯಾಗಿ ಶುದ್ಧೀಕರಣ ಮಾಡದಿರುವುದು ಕಂಡುಬಂದಿದ್ದು, ಸಮರ್ಪಕವಾಗಿ ನೀರು ಶುದ್ಧೀಕರಿಸಿ ಪೂರೈಸಬೇಕು. ಮುಂದಿನ 30 ವರ್ಷಗಳಲ್ಲಿ ಆಗಬಹುದಾದ ಜನಸಂಖ್ಯೆಯನ್ನು ಆಧಾರವಾಗಿಟ್ಟುಕೊಂಡು, ಕುಡಿಯುವ ನೀರಿನ ಯೋಜನೆಗಳನ್ನು ನಿರ್ಮಿಸಬೇಕು ಎಂದು ಸಂಸದರುಅಧಿಕಾರಿಗಳಿಗೆಸೂಚನೆನೀಡಿದರು.ಭದ್ರಾ ಮೇಲ್ದಂಡೆ ಯೋಜನೆ ಕುರಿತು ಪಡೆದ ಸಂಸದರು, ಕೇಂದ್ರ ಸರ್ಕಾರ ಕಳೆದ ಬಜೆಟ್‌ನಲ್ಲಿ ಘೋಷಿಸಿರುವ 5300 ಕೋಟಿ ರೂ. ಅನುದಾನ ಪಡೆಯುವ ಕುರಿತು ಸೂಕ್ತ ಕ್ರಮ ವಹಿಸುವುದಾಗಿ ಹೇಳಿದರು. ರಸ್ತೆ ಬದಿಗಳಲ್ಲಿ ನೆಡುವ ಗಿಡಗಳ ಪೈಕಿ ಶೇ. 90 ರಷ್ಟು ವಿಫಲವಾಗುತ್ತಿರುವುದು ಕಂಡುಬಂದಿದ್ದು, ಇದರ ಜೊತೆಗೆ ಜಿಲ್ಲೆಯ ಸರ್ಕಾರಿ ಜಾಗ, ಕಚೇರಿ, ಹಾಸ್ಟೆಲ್, ಶಾಲೆ, ಕಾಲೇಜು ಆವರಣದಲ್ಲಿ ಅರಣ್ಯ ಇಲಾಖೆಯವರು ಹೆಚ್ಚಿನ ಗಿಡಗಳನ್ನು ನೆಡಬೇಕು ಎಂದು ಸೂಚನೆ ನೀಡಿದರು. ಪಿಎಂ ವಿಶ್ವಕರ್ಮ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ನೊಂದಾಯಿಸಲು ಅಧಿಕಾರಿಗಳು ಅಸಂಘಟಿತ ಕಾರ್ಮಿಕ ವಲಯದ ಸಂಘ ಸಂಸ್ಥೆಗಳ ನೆರವು ಪಡೆಯಬೇಕು. ಗ್ರಾಮೀಣ ಜನರು ಕೆಲಸ ಅರಸಿಕೊಂಡು ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯಲು ನರೇಗಾ ಯೋಜನೆಯಡಿ ಸ್ಥಳೀಯವಾಗಿಯೇ ಹೆಚ್ಚಿನ ಉದ್ಯೋಗವನ್ನು ಸೃಷ್ಟಿಸಿ, ಕೆಲಸ ಕೊಡಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಎಸ್‌ಪಿ ಧರ್ಮೇಂದ್ರ ಕುಮಾರ್ ಮೀನಾ, ಉಪವಿಭಾಗಾಧಿಕಾರಿ ಕಾರ್ತಿಕ್, ಜಿ.ಪಂ. ಯೋಜನಾ ನಿರ್ದೇಶಕ ಡಾ. ರಂಗಸ್ವಾಮಿ, ಜಿ.ಪಂ. ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಶಿಕ್ಷಕರ ಕ್ಷೇತ್ರ ಗೆಲುವು ಸಾಧಿಸಿದ ಶ್ರೀನಿವಾಸ್‌ಗೆ ಅಭಿನಂದನೆ

» ಮೊದಲ ಪುಟದಿಂದ

ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಹೆಚ್ಚು ಮತ ನೀಡಿದ್ದರೂ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಬೇರೆ ಕ್ಷೇತ್ರದಲ್ಲಿ ಮತ ಕಡಿಮೆಗಳಿಸಿದ್ದು ಸೋಲಿಗೆ ಕಾರಣವಾಗಿದೆ. ಚಂದ್ರಪ್ಪನವರು ಕಳೆದ ಹತ್ತು ವರ್ಷಗಳಿಂದ ಈ ಜಿಲ್ಲೆಯಲ್ಲಿ ಕಾರ್ಯಕರ್ತರು ಹಾಗೂ ಮುಖಂಡರೊಂದಿಗೆ ಪಕ್ಷದ ಸಂಘಟನೆಗೆ ಸಹಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ಪಕ್ಷ ಅವರಿಗೆ ಇನ್ನೂ ಹೆಚ್ಚಿನ ಹೊಸ ಜವಾಬ್ದಾರಿ ನೀಡಬೇಕೆಂಬುವುದು ನನ್ನ ಮಹದಾಸೆ ಎಂದರು. ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಗೆಲುವು ಸಾಧಿಸಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಶಿಕ್ಷಕರ ಸಮೂಹದಿಂದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಆಗ್ನೇಯ ಶಿಕ್ಷಕರ ಕ್ಷೇತ್ರ ವಿಧಾನಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್, ಕಾಂಗ್ರೆಸ್ ಪಕ್ಷ ನನಗೆ ಈ ಕ್ಷೇತ್ರದಿಂದ ಟಿಕೆಟ್ ನೀಡಿ ಗೆಲುವು ಸಾಧಿಸಲು ಸಹಕಾರ ನೀಡಿದೆ. ನಿರೀಕ್ಷೆಗೂ ಮೀರಿ ಈ ಕ್ಷೇತ್ರದಲ್ಲಿ ಹೆಚ್ಚಿನ ಮತಗಳು ನನಗೆ ಬಂದಿವೆ. ಬಹುತೇಕ ಶಿಕ್ಷಕರು ಮತ ನೀಡಿದ್ದಾರೆ, ಶಿಕ್ಷಕರ ಸಮಸ್ಯೆಗಳ ಬಗ್ಗೆ ಸಕರಾತ್ಮಕವಾಗಿ ಸ್ಪಂದಿಸುವ ಭರವಸೆ ನೀಡುವೆ. ಈ ಕ್ಷೇತ್ರದ ಗೆಲುವು ನನ್ನ ಗೆಲುವಲ್ಲ, ಬದಲಾಗಿ ಶಿಕ್ಷಕರ ಸಮೂಹದ ಸ್ನೇಹಿತರು ಹಾಗೂ ಕಾಂಗ್ರೆಸ್ ಪಕ್ಷ ಎಲ್ಲಾ ಹಂತದ ನಾಯಕರಿಗೆ ಸೇರಿದೆ. ಮುಂಬರುವ ಪಕ್ಷದ ಚುನಾವಣೆಯಲ್ಲೂ ಪಕ್ಷದ ಪರವಾಗಿ ಕಾರ್ಯನಿರ್ವಹಿಸಿ ಗೆಲುವಿಗೆ ಶ್ರಮಿಸುವೆ. ಈ ಕ್ಷೇತ್ರದ ಶಿಕ್ಷಕರ ಹಲವಾರು ಬೇಡಿಕೆಗಳ ಬಗ್ಗೆ ಈಗಾಗಲೇ ಮನವಿ ಸ್ವೀಕರಿಸಿದ್ದೇನೆ, ಈಗ ನನ್ನ ಜವಾಬ್ದಾರಿಯೂ ಹೆಚ್ಚಿದೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತ ವಿದ್ದು ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಶಿಕ್ಷಕರ ಸಮಸ್ಯೆಗೆ ಪರಿಹಾರ ಹುಡುಕಿಕೊಡುವ ಭರವಸೆ ನೀಡಿದರು.

# ಚಿಕ್ಕಾಲಘಟ್ಟ ಗ್ರಾಮದಲ್ಲಿ ಜನಸ್ಪಂದನ ಕಾರ್ಯಕ್ರಮ

## ಶೀಘ್ರ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಯ ಭರವಸೆ: ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಭರವಸೆ

» ಚಿತ್ರದುರ್ಗ





ಚಿಕ್ಕಾಲಘಟ್ಟ ಗ್ರಾಮದ ಬಹುದಿನಗಳ ಬೇಡಿಕೆಯಾದ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣಕ್ಕೆ ಈಗಾಗಲೇ ಜಾಗ ಗುರುತಿಸಲಾಗಿದೆ. ಶೀಘ್ರ ದಲ್ಲೇ ಶುದ್ಧ ನೀರಿನ ಘಟಕವನ್ನು ಸ್ಥಾಪಿಸಿ, ಕಾರ್ಯಾರಂಭ ಮಾಡಲಾಗುವುದು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಭರವಸೆ ನೀಡಿದರು.

ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಹೋಬಳಿ ಆಲಘಟ್ಟ ಗ್ರಾ.ಪಂ ವ್ಯಾಪ್ತಿಯ ಚಿಕ್ಕಾಲಘಟ್ಟ ಗ್ರಾಮದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಆಡಳಿತ ವತಿಯಿಂದ ಆಯೋಜಿಸಲಾದ "ತಾಲ್ಲೂಕು ಮಟ್ಟದ ಜನ ಸ್ಪಂದನಾ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗ ತಾಲ್ಲೂಕಿನ ಗ್ರಾಮಾಂತರ ಪ್ರದೇಶದ 158 ಹಳ್ಳಿಗಳಿಗೆ ವಾರಿ ಕಣಿವೆ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆ ವ್ಯಾಪ್ತಿಯಲ್ಲಿ ಚಿಕ್ಕಾಲಘಟ್ಟ ಗ್ರಾಮ ಸೇರ್ಪಡೆಯಾಗಿರಲಿಲ್ಲ.

ತದನಂತರದಲ್ಲಿಒತ್ತಾಯಪೂರ್ವಕವಾಗಿ ಚಿಕ್ಕಾಲಘಟ್ಟ ಗ್ರಾಮವನ್ನೂ ಯೋಜನಾ ವ್ಯಾಪ್ತಿಗೆ ಸೇರಿಸಲು ಕ್ರಮ ಕೈಗೊಂಡಿದ್ದೇನೆ. ಗ್ರಾಮದ ಸರ್ಕಾರಿ ಶಾಲೆ ಮುಚ್ಚುವ ಹಂತದಲ್ಲಿತ್ತು. ಇದನ್ನು ತಪ್ಪಿಸಿ ಶಾಲೆಯನ್ನು ಉಳಿಸಲಾಗಿದೆ.

ಚಿಕ್ಕಾಲಘಟ್ಟ ಗ್ರಾಮವನ್ನು ಗಣಿ ಭಾದಿತ ಪ್ರದೇಶದ ವ್ಯಾಪ್ತಿಗೆ ಸೇರಿಸಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ. ಇದನ್ನು ಆದ್ಯತೆಯಾಗಿ ಪರಿಗಣಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಮನೆಗಳು ಮಂಜೂರಾಗಲಿವೆ. ಗ್ರಾಮ ಸಭೆ ನಡೆಸಿ ಅರ್ಹ ಫಲಾನುಭವಿಗಳಿಗೆ ಮನೆ ಹಂಚುವ ಕಾರ್ಯ ಮಾಡಲಾಗುವುದು ಎಂದು ಶಾಸಕ ವೀರೇಂದ್ರ ಪಪ್ಪಿ ಹೇಳಿದರು.

ಗ್ರಾಮದ ದೇವಾಲಯಗಳಿಗೆ ರೂ.10 ಲಕ್ಷ ಅನುದಾನ: ಗ್ರಾಮದ ಈಶ್ವರ ದೇವಸ್ಥಾನ ಹಾಗೂ ದುರ್ಗಾಂಭ ದೇವಾಲಯಗಳ ಜೀರ್ಣೋದ್ಧಾರಕ್ಕೆ ಮುಜರಾಯಿ ಇಲಾಖೆಯಿಂದ ತಲಾ ರೂ.5 ಲಕ್ಷದಂತೆ ಒಟ್ಟು ರೂ.10 ಲಕ್ಷ ಅನುದಾನ ಒದಗಿಸಲಾಗಿದೆ. ಗ್ರಾಮದ ಸಿ.ಸಿ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ರೂ.15 ಲಕ್ಷ ಅನುದಾನ ಒದಗಿಸಿದ್ದು, ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಲಾಗಿದೆ ಎಂದು ಶಾಸಕ ವೀರೇಂದ್ರ ಪಪ್ಪಿ ಹೇಳಿದರು.

ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಮಾತನಾಡಿ, ಇಡೀ ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತ ತಮ್ಮ ಗ್ರಾಮಕ್ಕೆ ಆಗಮಿಸಿ, ಸಮಸ್ಯೆ ಅಹವಾಲುಗಳನ್ನು ಆಲಿಸಿದೆ. ನಿಗದಿತ ಸಮಯದೊಳಗೆ ಈ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡಲಾಗುವುದು. ಕುರಿತು ಅರ್ಜಿಯೊಂದಿಗೆ ನೀವು ನೀಡಿರುವ ಮೊಬೈಲ್ ನಂಬರ್‌ಗೆ ಸಮಸ್ಯೆ ಪರಿಷ್ಕಾರದ ಹಂತದ ಕುರಿತು ಸಂದೇಶವನ್ನು ಕಳುಹಿಸಿಕೊಡಲಾಗುವುದು. ಸರ್ಕಾರದ ಜನಪರ ಆಡಳಿತದ ಪರಿಣಾಮವಾಗಿ ಜನಸ್ಪಂದನಕಾರ್ಯಕ್ರಮರೂಪುಗೊಂಡಿದೆ ಎಂದರು.

ತಹಶೀಲ್ದಾರ್ ಡಾ.ನಾಗವೇಣಿ ಮಾತನಾಡಿ, ಜನಸ್ಪಂದನ ಕಾರ್ಯಕ್ರಮದಲ್ಲಿ ಐಪಿಜಿಆರ್‌ಎಸ್ ತಂತ್ರಾಂಶದ ಮೂಲಕ ನೀವು ನೀಡಿರುವ ಅರ್ಜಿಯನ್ನು ಸ್ವೀಕರಿಸಲಾಗುವುದು. ಹೀಗೆ ಸ್ವೀಕರಿಸಿದ ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಿಕೊಟ್ಟು ಸಮಸ್ಯೆಗೆ ಪರಿಹಾರ ದೊರಕಿಸಿಕೊಡಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೋರಿದರು.

ಜನಸ್ಪಂದನ ಕಾರ್ಯಕ್ರಮಕ್ಕೆ ಉತ್ತಮ ಪ್ರತಿಕ್ರಿಯೆ: ಲೋಕಸಭೆ ಚುನಾವಣೆ ನಂತರ ಆಯೋಜಿಸಲಾದ ಜನ ಸ್ಪಂದನ ಕಾರ್ಯಕ್ರಮಕ್ಕೆ ಚಿಕ್ಕಾಲಘಟ್ಟ ಗ್ರಾಮಸ್ಥರಿಂದ ಉತ್ತಮ ಪ್ರತಿಕ್ರಿಯೆ ದೊರಕಿತು. ಗ್ರಾಮಕ್ಕೆ ಆಗಮಿಸಿದ ಶಾಸಕ ವಿರೇಂದ್ರ ಪಪ್ಪಿ ಅವರನ್ನು ಹಸಿರು ತೋರಣದಿಂದ ಅಲಂಕೃತಗೊಂಡ ಜೋಡೆತ್ತಿನ ಬಂಡಿಯ ಮೇಲೆ ಗ್ರಾಮಕ್ಕೆ ಕರೆತರಲಾಯಿತು. ಪೂರ್ಣಕುಂಬ ಹೊತ್ತ ಅಂಗನಾಡಿ ಕಾರ್ಯಕರ್ತೆಯರು ಸ್ವಾಗತಕೋರಿದರು. ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಇದೇ ಸಂದರ್ಭದಲ್ಲಿ ಕಟ್ಟಡ ಕಾರ್ಮಿಕ ಹಾಗೂ ಕಲ್ಯಾಣ ಮಂಡಳಿ ವತಿಯಿಂದ 25 ಕಾರ್ಮಿಕರ ಮಕ್ಕಳಿಗೆ ಉಚಿತ ಲ್ಯಾಪ್‌ಟಾಪ್ ವಿತರಣೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಪೋನ್,ಸಮವಸ್ತ್ರ,ಶಿಕ್ಷಣ ಇಲಾಖೆ ವತಿಯಿಂದ ಸರ್ಕಾರಿ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ ಹಾಗೂ ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಶಾಸಕ ವಿರೇಂದ್ರ ಪಪ್ಪಿ, ಗ್ರಾಮ ವಿಕಚೇತನರೊಬ್ಬರಿಗೆ ಸರ್ಕಾರದಿಂದ ನೀಡಲಾದ ಟ್ರೈಸಿಕಲ್ ಸ್ಕೂಟರ್ ದುರಸ್ಥಿಯನ್ನು ಸ್ವತಂ ಖರ್ಚಿನಿಂದ ಮಾಡಿಸಿಕೊಡುವುದಾಗಿ ಭರವಸೆ ನೀಡಿದರು. ಜನಸ್ಪಂದನ ಕಾರ್ಯಕ್ರಮದ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹೆಚ್. ಹನುಮಂತಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಗ್ರೇಡ್-2 ತಹಶೀಲ್ದಾರ್ ನಾಗರಾಜ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಘಟಕದ ಅಧ್ಯಕ್ಷ ಶಿವಣ್ಣ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ನರಸಿಂಹಮೂರ್ತಿ, ಆಲಘಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಂ.ನಾಗರಾಜ್, ಉಪಾಧ್ಯಕ್ಷೆ ನಿರ್ಮಲಮ್ಮ, ಗ್ರಾಮ ಪಂಚಾಯಿತಿ ಸದಸ್ಯರು ಸೇರಿದಂತೆ ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



ಚಿತ್ರದುರ್ಗ ನಗರದ ಕೇತೇಶ್ವರ ಸಂಸ್ಥಾನದಲ್ಲಿ ನಡೆಯುತ್ತಿರುವ ನವೀನ ಪ್ರೌಢಶಾಲೆಗೆ ಡಿಸಿಸಿ ಬ್ಯಾಂಕ್‌ನ ನಿರ್ದೇಶಕ ಮಾಧುರಿ ಗಿರೀಶ್‌ರವರ ಕಂಪ್ಯೂಟರ್ ಕೊಡುಗೆಯಾಗಿ ನೀಡಿದರು. ರಾಜ್ಯ ಎಸ್.ಸಿ. ಮೋರ್ಚಾದ ಪ್ರಧಾನ ಕಾರ್ಯದರ್ಶಿ ಉಮೇಶ್ ಕಾರಜೋಳ, ಬಿಜೆಪಿ ನಗರಾಧ್ಯಕ್ಷ ನವೀನ್ ಚಾಲುಕ್ಯ, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಆದರ್ಶ, ಕಿರಣ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ಹಾಜರಿದ್ದರು.

## ನೀರು ನೈರ್ಮಲ್ಯ ಸ್ವಚ್ಚತೆ ಬಗ್ಗೆ ಅರಿವು



» ಚಿತ್ರದುರ್ಗ

ಕಲುಷಿತ ನೀರು ಸೇವನೆಯಿಂದ ಸಾಂಕ್ರಾಮಿಕ ರೋಗಗಳು ಹರಡುತ್ತದೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಗ್ರಾಮಸ್ಥರಲ್ಲಿ ಅರಿವು ಮೂಡಿಸಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಚಿಕ್ಕಪ್ಪನಹಳ್ಳಿ ಕಾರ್ಯಕ್ಷೇತ್ರದ ನೇಸರ ಜ್ಞಾನವಿಕಾಸ ಕೇಂದ್ರದ ಸದಸ್ಯರಿಗೆ ಹಾಗೂ ಗ್ರಾಮಸ್ಥರಿಗೆ ನೀರು ನೈರ್ಮಲ್ಯ ಸ್ವಚ್ಚತೆ ಬಗ್ಗೆ ಆಯೋಜಿಸಲಾಗಿದ್ದ ಬೀದಿ ನಾಟಕ ಉದ್ಘಾಟಿಸಿ ಮಾತನಾಡಿದರು. ಹೇಮಾವತಿ ಅಮ್ಮನವರು ಜ್ಞಾನವಿಕಾಸ ಕಾರ್ಯಕ್ರಮದಡಿ ಮಹಿಳೆಯರಿಗೆ ನಾನಾ ರೀತಿಯ ಯೋಜನೆಗಳನ್ನು ನೀಡಿದ್ದಾರೆ. ಬಡವರಿಗೂ ಶುದ್ದವಾದ ಕುಡಿಯವ ನೀರು ಸಿಗಬೇಕು. ಕಲುಷಿತ ನೀರು ಸೇವಿಸಿದರೆ ನಾನಾ ರೀತಿಯ ತೊಂದರೆಗಳಿಗೆ ಒಳಗಾಗಬೇಕಾಗುತ್ತದೆ. ಅದೇ ರೀತಿ ಗ್ರಾಮದಲ್ಲಿ ನಿಮ್ಮ ನಿಮ್ಮ ಮನೆಗಳ ಮುಂದೆ ಸ್ವಚ್ಚತೆಯನ್ನು ಕಾಪಾಡಿಕೊಳ್ಳಬೇಕೆಂದು ಮನವಿ ಮಾಡಿದರು.

## ತೈಲ ಬೆಲೆ ಏರಿಕೆ ಜಯ ಕರ್ನಾಟಕ ಖಂಡನೆ

» ಚಿತ್ರದುರ್ಗ

ರಾಜ್ಯ ಸರ್ಕಾರ ಪೆಟ್ರೋಲ್-ಡೀಸೆಲ್ ಬೆಲೆ ಏರಿಕೆ ಮಾಡಿರುವುದನ್ನು ಕೂಡಲೆ ಹಿಂದಕ್ಕೆ ಪಡೆಯಬೇಕೆಂದು ಒತ್ತಾಯಿಸಿ ಜಯ ಕರ್ನಾಟಕ ಜನಪರ ವೇದಿಕೆಯಿಂದ ಬುಧವಾರ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಪೆಟ್ರೋಲ್ ಲೀಟರ್‌ಗೆ ಮೂರು ರೂ. ಡೀಸೆಲ್ ಲೀಟರ್‌ಗೆ ಮೂರು ರೂ. ಐವತ್ತು ಪೈಸೆಗಳನ್ನು ಏರಿಸಿ ಬಡವರು,ರೈತರು,ಜನಸಾಮಾನ್ಯರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ತೊಂದರೆ ಕೊಡುತ್ತಿದೆ. ಬೆಲೆ ಏರಿಕೆಯಿಂದ ಬಸ್ ಪ್ರಯಾಣ ದರ ಹಾಗೂ ಅಗತ್ಯ ವಸ್ತುಗಳ ಬೆಲೆ ಸಾಮಾನ್ಯವಾಗಿ ಏರಿಕೆಯಾಗುತ್ತದೆ. ಹಾಗಾಗಿ ಮುಖ್ಯಮಂತ್ರಿಗಳು ಕೂಡಲೆ ದರ ಏರಿಕೆಯನ್ನು ಇಳಿಸಬೇಕೆಂದು ಮನವಿ ಮಾಡಿದರು.

ಜಯ ಕರ್ನಾಟಕ ಜನಪರ ವೇದಿಕೆಯ ಜಿಲ್ಲಾಧ್ಯಕ್ಷ ಬಿ.ಟಿ.ರಾಜೇಂದ್ರ, ಉಪಾಧ್ಯಕ್ಷ ಸಿದ್ದೇಶ್ವರ, ಪ್ರಧಾನ ಕಾರ್ಯದರ್ಶಿ ಸಿ.ಅಭಿಲಾಷ್, ತಾಲ್ಲೂಕು ಅಧ್ಯಕ್ಷ ಬಿ.ಅಶೋಕ್, ಕಾರ್ಯದರ್ಶಿ ಡಿ.ಗಿರೀಶ್, ಕಾರ್ಯಾಧ್ಯಕ್ಷ ನಿರಂಜನ್ ವಿ. ಸತೀಶ್, ರೋಹನ್, ಸ್ವಾಮಿ, ಪ್ರಿಯದರ್ಶನ್ ಇನ್ನು ಅನೇಕರು ಈ ಸಂದರ್ಭದಲ್ಲಿದ್ದರು.



**ಪ್ರಮುಖ ಸುದ್ದಿ**

# ಮಕ್ಕಳಲ್ಲಿ ವೈಜ್ಞಾನಿಕ ಭಾವನೆ ಮೂಡಿಸಿ: ಎಸ್.ನಾಗಭೂಷಣ್

» ಚಿತ್ರದುರ್ಗ




ವಿಜ್ಞಾನ ಪರಿಕರಗಳನ್ನು ಬಳಕೆ ಮಾಡಿಕೊಂಡು ಪ್ರಾಯೋಗಿಕವಾಗಿ ಮಕ್ಕಳಿಗೆ ಬೋಧಿಸಿದಾಗ ವಿಜ್ಞಾನದ ಬಗ್ಗೆ ಒಲವು ಹೆಚ್ಚಾಗಿ ಸಂಶೋಧನೆಗೆ ನೆರವಾಗಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಶಿಕ್ಷಕರಿಗೆ ಕರೆ ನೀಡಿದರು.

ನಗರದ ಬಿ.ಆರ್.ಸಿ.ಕೇಂದ್ರದಲ್ಲಿ ತಾಲ್ಲೂಕಿನ ಇನ್ನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ವಿಜ್ಞಾನ ಶಿಕ್ಷಕರುಗಳಿಗೆ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ವಿಜ್ಞಾನ ಕಿಟ್ ವಿತರಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟ ಹಾಗೂ ದಾಖಲಾತಿ ಕಡಿಮೆಯಿದೆ ಎನ್ನುವ ಕೂಗು ಎಲ್ಲೆಡೆ ಕೇಳಿ ಬರುತ್ತಿದೆ. ಸರ್ಕಾರಿ ಶಾಲೆಯ ಶಿಕ್ಷಕರುಗಳು ಮೂರು ಪರೀಕ್ಷೆಗಳಲ್ಲಿ ತೇರ್ಗಡೆಯಾಗಿ ನೇಮಕಗೊಳ್ಳುತ್ತಾರೆ. ಹಾಗಾಗಿ ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಬೋಧನೆ ಮಕ್ಕಳಿಗೆ ಸಿಗುತ್ತಿದೆ. ಇದರ ಜೊತೆ ಸಂಪನ್ಮೂಲಗಳನ್ನು ಬಳಕೆ ಮಾಡಿಕೊಂಡು ವಿಜ್ಞಾನವನ್ನು ಪ್ರಾಯೋಗಿಕವಾಗಿ ಮಕ್ಕಳಿಗೆ ಮನ ಮುಟ್ಟುವಂತೆ ಬೋಧಿಸಿದಾಗ ಹೆಚ್ಚು ಪರಿಣಾಮಕಾರಿಯಾಗುತ್ತದೆ ಎಂದು ಹೇಳಿದರು.ವೈಜ್ಞಾನಿಕ ಮನೋಭಾವನೆ ಮಕ್ಕಳಲ್ಲಿ ಮೂಡಿಸುವ ಗುರುತರ ಜವಾಬ್ದಾರಿ ಶಿಕ್ಷಕರುಗಳ ಮೇಲಿದೆ. ವಿಜ್ಞಾನ ಪರಿಕರಗಳು ಉತ್ಕೃಷ್ಠ ರೀತಿಯಲ್ಲಿ ಬಳಕೆಯಾಗಬೇಕು. ಇದರಿಂದ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಸಹಕಾರಿಯಾಗಲಿದೆ. ಸರ್ಕಾರಿ ಶಾಲೆಗಳಲ್ಲಿ ಓದಿದ ಮಕ್ಕಳು ಇಸ್ರೋ, ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ ವಿಜ್ಞಾನಿಗಳಾಗಬಹುದು. ಈ ನಿಟ್ಟಿನಲ್ಲಿ ಶಿಕ್ಷಕರುಗಳ ಪಾತ್ರ ದೊಡ್ಡದು ಎಂದು ತಿಳಿಸಿದರು.ಸರ್ಕಾರಿ ಶಾಲೆಗೆ ಸೇರುವ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ವಿಜ್ಞಾನವನ್ನು ಪರಿಣಾಮಕಾರಿಯಾಗಿ ಬೋಧಿಸಿದರೆ ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡುತ್ತದೆ ಎಂದರು.

ಐ.ಎಲ್.ಪಿ. ಪ್ರಾಜೆಕ್ಟ್ ಮ್ಯಾನೇಜರ್ ಮಂಜುನಾಥ್ ಬೆಸ್ತರ್ ಮಾತನಾಡಿ ಗ್ರಾಮೀಣ ಭಾಗದ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಹೆಚ್ಚಿಸಿ ಪ್ರಾಯೋಗಿಕ ಚಟುವಟಿಕೆಗಳಿಗೆ ವಿಜ್ಞಾನ ಕಿಟ್‌ಗಳು ಪ್ರಯೋಜನಕಾರಿಯಾಗಲಿದೆ. ಸರ್ಕಾರಿ ಶಾಲೆಗಳಲ್ಲಿನ ಮಕ್ಕಳಿಗೆ ಇಂತಹ ಸೌಲಭ್ಯಗಳು ಕಡಿಮೆಯಿರುವುದರಿಂದ ಐ.ಎಲ್.ಪಿ. ಮತ್ತು ಎಲುಷಿಯನ್ ಸಂಸ್ಥೆಗಳು ನೀಡುವ ವಿಜ್ಞಾನ ಕಿಟ್‌ಗಳನ್ನು ಬಳಸಿಕೊಂಡು 6 ರಿಂದ 10 ನೇ ತರಗತಿಯ ಮಕ್ಕಳಿಗೆ ಪಠ್ಯಪುಸ್ತಗಳಲ್ಲಿನ ವಿಷಯಗಳಿಗೆ ಸಂಬಂಧಿಸಿದಂತೆ ಪ್ರಾಯೋಗಿಕವಾಗಿ ಬೋಧಿಸಬಹುದು ಎಂದು ತಿಳಿಸಿದರು.

ಬಿ.ಆರ್.ಸಿ. ಸಂಪತ್‌ಕುಮಾರ್, ಐ.ಎಲ್.ಪಿ. ಪ್ರೋಗ್ರಾಮ್ ಮ್ಯಾನೇಜರ್ ಹರೀಶ್ ಕೆ. ಎಲುಷಿಯಾನ ಹಿರಿಯ ವ್ಯವಸ್ಥಾಪಕ ಶರತ್‌ಕುಮಾರ್, ಎಲುಷಿಯಾನ ಮಾಹಿತಿ ತಂತ್ರಜ್ಞಾನ ನಿರ್ದೇಶಕ ದಿವಾಕರಗುಪ್ತ ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ರೇಣುಕಾ ಸ್ವಾಮಿ ಹತ್ಯೆ: ತಪ್ಪು ಮಾಡಿದವರಿಗೆ ಶಿಕ್ಷೆಯಾಗಬೇಕು

» ಮೊದಲ ಪುಟದಿಂದ

ಹಿಂದಿನ ನಟ ನಟಿಯರು ಈ ಭಾವನೆಯನ್ನು ಗಳಿಸಿ, ಉಳಿಸಿಕೊಂಡಿದ್ದರು. ಆದರೆ ಪ್ರಸ್ತುತ ಕೆಲ ನಟ ನಟಿಯರು ದೆವ್ವದ ರೀತಿಯಲ್ಲಿ ವರ್ತಿಸುತ್ತಿದ್ದಾರೆ ಕಾರಣ ಅವರಿಗೆ ಸಾಕಷ್ಟು ಸಂಪನ್ಮೂಲ ದೊರೆಯುತ್ತಿದೆ. ಗುಂಪುಗಾರಿಕೆ ಅಧಿಕವಾಗಿದೆ. ತುಂಬಾ ಜವಾಬ್ದಾರಿ ಇರೋ ಅಭಿಮಾನಿಗಳಿಗಿಂತ ಹುಚ್ಚೆದ್ದು ಕುಣಿಯೋ ಅಭಿಮಾನಿಗಳು ಹೆಚ್ಚಾಗಿದ್ದಾರೆ. ಮಾಧ್ಯಮದವರು ಬಹಳ ದೊಡ್ಡ ಜವಾಬ್ದಾರಿ ಹೊತ್ತಿರುತ್ತಾರೆ. ಅವರು ಪಾರದರ್ಶಕತೆ ಮೈಗೂಡಿಸಿಕೊಂಡು, ನಿಷ್ಠುರವಾಗಿ, ವಸ್ತು ಸತ್ಯವಾಗಿರಬೇಕು ಎಂದರು. ಹಿಂದೆ ಮಕ್ಕಳ ಶಿಬಿರಕ್ಕೊಮ್ಮೆ ದರ್ಶನ್ ಶ್ರೀಮಠಕ್ಕೆ ಭೇಟಿ ನೀಡಿ, ಮಕ್ಕಳೊಂದಿಗೆ ಸಂವಾದ ನಡೆಸಿದ್ದರು. ಆಗ ನಟರಿಗೆ ಮದ್ಯಪಾನ ಸೇವನೆ ಸಾಮಾನ್ಯವಾಗಿ ಬಿಟ್ಟಿದೆ. ಹೀಗಾದರೆ ಜನರಿಗೆ ನಿಮ್ಮ ಸಂದೇಶವೇನು ಎಂದು ಕೇಳಿದ ಪ್ರಶ್ನೆಗೆ, ಅವರು ಕ್ಯಾಮೆರಾ ಬೆಳಕಿನಲ್ಲಿ, ಮುಖಕ್ಕೆ ಬಣ್ಣ ಹಚ್ಚಿ ಕಾರ್ಯ ನಿರ್ವಹಿಸುವುದು ಒತ್ತಡದ ಕೆಲಸ ಹಾಗಾಗಿ ಮದ್ಯಪಾನ ಸೇವಿಸುವುದಾಗಿ ಉತ್ತರ ನೀಡಿದ್ದರು. ಈ ಉತ್ತರದ ಬಗ್ಗೆ ಅಸಮಾಧಾನ ಉಂಟಾಯಿತು ಎಂದರು.

### ಗೃಹಲಕ್ಷ್ಮೀ ಗ್ಯಾರಂಟಿ ಅಡೆತಡೆ ನಿವಾರಣೆಗೆ ಹೆಲ್ಪ್ ಡೆಸ್ಕ್

» ದಾವಣಗೆರೆ

ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿ ಇದುವರೆವಿಗೂ ಸಹಾಯಧನ ಪಾವತಿ ಆಗದೇ ಇದ್ದಲ್ಲಿ, ಸಂಬಂಧಪಟ್ಟ ಫಲಾನುಭವಿಗಳು ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ತೆರಳಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಹಾಗೂ ಕಾರಣಾಂತರಗಳಿಂದ ಗೃಹಲಕ್ಷ್ಮಿ ಯೋಜನೆಗೆ ನೊಂದಣಿ ಮಾಡಿಕೊಳ್ಳದೇ ಇರುವ ಫಲಾನುಭವಿಗಳು ಗ್ರಾಮ ಒನ್, ಸೇವಾ ಸಿಂಧೂ ಕೇಂದ್ರಗಳಲ್ಲಿ ನೊಂದಾಯಿಸಿಕೊಳ್ಳಬಹುದು. ಸಂಪರ್ಕಿಸಬೇಕಾದ ವಿಳಾಸ: ದಾವಣಗೆರೆ ದುರ್ಗಾಂಬಿಕ ಶಾಲೆ ಹತ್ತಿರವಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಗಳ ಕಚೇರಿಯ ತುಷಾರ್ 9380629266, ಹರಿಹರ ಶಿವಮೊಗ್ಗ ರಸ್ತೆ ಪಿಎಲ್‌ಡಿ ಬ್ಯಾಂಕ್ ನೆಲಮಹಡಿ ಕಿರಣ್ 9731262426, ಜಗಳೂರು ತಾಲ್ಲೂಕು ಪಂಚಾಯಿತಿ ಆವರಣದ ಸ್ತ್ರೀಶಕ್ತಿ ಭವನದಲ್ಲಿ ಈಶ್ವರ 9740192819, ಹೊನ್ನಾಳಿಯಲ್ಲಿ ಟಿಎಂ ರಸ್ತೆಯಲ್ಲಿನ ಮಲ್ಲಪ್ಪ ಕಾಂಪ್ಲೆಕ್ಸ್‌ನಲ್ಲಿರುವ ಕಚೇರಿಯಲ್ಲಿ ಸುದೀಪ್ 9844019027, ಚನ್ನಗಿರಿ ಶಿವಮೊಗ್ಗ ರಸ್ತೆಯಲ್ಲಿನ ಜಿ.ಎಂ.ಕಾಂಪ್ಲೆಕ್ಸ್‌ನಲ್ಲಿನ ಕಚೇರಿಯಲ್ಲಿ ಶಿವಣ್ಣ 9686601791 ಇವರನ್ನು ಅಥವಾ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಜೂನ್ 21 ರಂದು 10ನೇ ಯೋಗ ದಿನಾಚರಣೆ, ಜಿಲ್ಲಾ ಉಸ್ತುವಾರಿ ಸಚಿವರಿಂದ ಉದ್ಘಾಟನೆ

» ದಾವಣಗೆರೆ

ಜೂನ್ 21 ರಂದು ಬೆಳಿಗ್ಗೆ 5.30ಕ್ಕೆ ನಗರದ ಹೈಸ್ಕೂಲ್ ಮೈದಾನದಲ್ಲಿ ಸ್ವಂತ ಸಮಾಜಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕಾರ್ಯಕ್ರಮವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಾನಗರಪಾಲಿಕೆ, ಜಿಲ್ಲಾ ಯೋಗ ಒಕ್ಕೂಟ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ತಪೋವನ ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ ಮೆಡಿಕಲ್ ಕಾಲೇಜ್, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜ್, ಎನ್.ಸಿ.ಸಿ., ಎನ್.ಎಸ್.ಎಸ್. ಘಟಕ, ಪ್ರಜಾಪಿತ ಬ್ರಹ್ಮಕುಮಾರೀಸ್, ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಪತಂಜಲಿ ಯೋಗ ಸಮಿತಿ ಇವರುಗಳ ಸಹಕಾರದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ. ದಾವಣಗೆರೆ ದಕ್ಷಿಣ ವಿಧಾನಸಭಾ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಹರಿಹರ ಶಾಸಕ ಬಿ.ಪಿ. ಹರೀಶ್, ಮಾಯಕೊಂಡ ಶಾಸಕ ಕೆ.ಎಸ್ .ಬಸವಂತಪ್ಪ, ಚನ್ನಗಿರಿ ಶಾಸಕ ಬಸವರಾಜು ವಿ. ಶಿವಗಂಗಾ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್. ಎನ್, ಚಿದಾನಂದ ಎಂ.ಗೌಡ, ಕೆ.ಎಸ್ ನವೀನ್, ಡಿ.ಟಿ.ಶ್ರೀನಿವಾಸ್, ಎಸ್.ಎಲ್ .ಬೋಜೇಗೌಡ, ಡಿ.ಎಸ್ ಅರುಣ್, ಕೆ. ಅಬ್ದುಲ್ ಜಬ್ಬಾರ್, ಡಾ.ಧನಂಜಯ ಸರ್ಜಿ ಭಾಗವಹಿಸುವರು.

---

ನೀರು ಇಂಗಿಸುವ ಮಳೆಕೊಯ್ಲು, ಜಲಾನಯನ ಪ್ರದೇಶಾಭಿವೃದ್ಧಿಗೆ ಒತ್ತು ನೀಡಲು ಸೂಚನೆ

# ಹವಾಮಾನ ವೈಪರೀತ್ಯ ತಡೆಯಲು ಗಿಡ ಬೆಳೆಸಿ

» ದಾವಣಗೆರೆ



ಹವಾಮಾನ ವೈಪರಿತ್ಯದಿಂದ ತಾಪಮಾನ ಹೆಚ್ಚಾಗುವ ಜೊತೆಗೆ ಬರಸ್ಥಿತಿಯನ್ನು ಎದುರಿಸುವಂತಾಗಲು ಮುಂದಾಲೋಚನೆಯಿಂದ ಮರಗಿಡ ಬೆಳೆಸಿ ಜಲಸಂರಕ್ಷಣಾ ಕಾಮಗಾರಿಗಳನ್ನು ಹೆಚ್ಚಾಗಿ ಕೈಗೊಳ್ಳುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ನೆಲ, ಜಲ ಹಾಗೂ ಪರಿಸರ ಸಂರಕ್ಷಣಾ ಆಂದೋಲನಾ ಸಮಿತಿ ಸದಸ್ಯರು ಹಾಗೂ ರೈತ ಮುಖಂಡರು ಮತ್ತು ವಿವಿಧ ಇಲಾಖೆ ಅಧಿಕಾರಿಗಳು, ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಅಧಿಕಾರಿಗಳೊಂದಿಗೆ ನೆಲ, ಜಲ, ಪರಿಸರ ಸಂರಕ್ಷಣೆ ಕುರಿತು ಏರ್ಪಡಿಸಲಾದ ಸಭೆಯಲ್ಲಿ ಇಲಾಖಾವಾರು ಜಲಸಂರಕ್ಷಣಾ, ಅರಣ್ಯೀಕರಣ ಕಾಮಗಾರಿಗಳ ಪರಿಶೀಲನೆ ನಡೆಸಿ ಮಾತನಾಡಿದರು.

ಕಳೆದ ವರ್ಷದ ಭೀಕರ ಬರಗಾಲದಿಂದ ಸಾಕಷ್ಟು ಪಾಠವನ್ನು ಕಲಿಯಲಾಗಿದ್ದು ಜಲ ಸಂರಕ್ಷಣೆ, ಅರಣ್ಯೀಕರಣಕ್ಕೆ ಮುಂದಾಗಬೇಕಾಗಿದೆ. ಎಲ್ಲೆಲ್ಲಿ ಜಲಸಂರಕ್ಷಣಾ ಕೆಲಸವಾಗಿದೆ, ಅಂತಹ ಪ್ರದೇಶದಲ್ಲಿ ಕಳೆದ ಬೇಸಿಗೆಯಲ್ಲಿ ನೀರಿನ ಸಮಸ್ಯೆಯಾಗಿರುವುದಿಲ್ಲ. ಮತ್ತು ಎಲ್ಲೆಲ್ಲಿ ಅರಣ್ಯೀಕರಣ ಹೆಚ್ಚಿದೆ ಅಂತಹ ಕಡೆಯು ತಾಪಮಾನ ನಿಯಂತ್ರಣವಾಗಿರುವುದನ್ನು ಕಾಣಲಾಗಿದೆ. ಈ ಹಿನ್ನಲೆಯಲ್ಲಿ ನೀರು, ನೆಲ, ಪರಿಸರ, ಹವಾಮಾನ ಸಂರಕ್ಷಣೆಗಾಗಿ ಎಲ್ಲಾ ಇಲಾಖೆಗಳು ಭವಿಷ್ಯದ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡಬೇಕಾಗಿದೆ ಎಂದರು.

ಹೊಸ ಕೆರೆಗಳ ನಿರ್ಮಾಣ ಮತ್ತು ಮಳೆ ನೀರುಕೊಯ್ಲು; ಜಿಲ್ಲೆಯಲ್ಲಿ ಎಲ್ಲಾ ಕೆರೆಗಳು ಸೇರಿ 595 ಕೆರೆಗಳಿದ್ದು ಇನ್ನೂ ಹೊಸದಾಗಿ ಕೆರೆಗಳ ನಿರ್ಮಾಣ ಮಾಡುವ ಮೂಲಕ ಮಳೆಗಾಲದಲ್ಲಿ ನೀರು ನಿಲ್ಲಿಸಿ, ಇಂಗಿಸುವ ಕೆಲಸ ಮಾಡಬೇಕಾಗಿದೆ. ಪ್ರಾದೇಶಿಕ ಅರಣ್ಯ ಇಲಾಖೆಯಲ್ಲಿ 36 ಕೆರೆಗಳಿದ್ದು ಇವುಗಳಲ್ಲಿನ ಹೂಳನ್ನು ತೆಗೆಯುವ ಮೂಲಕ ಮಳೆಗಾಲದಲ್ಲಿ ಹೆಚ್ಚು ನೀರು ನಿಲ್ಲುವಂತೆ ಮಾಡುವ ಮೂಲಕ ಪ್ರಾಣಿ, ಪಕ್ಷಿಗಳಿಗೆ ಕುಡಿಯುವ ನೀರು ಜೊತೆಗೆ ಅಂತರ್ಜಲಹೆಚ್ಚಳಕ್ಕೆಅನುಕೂಲವಾಗಲಿದ್ದು ಇದಕ್ಕಾಗಿ ಕ್ರಿಯಾ ಯೋಜನೆ ರೂಪಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿಗೆ ತಿಳಿಸಿ ಗ್ರಾಮಗಳ ಸಮೀಪ, ಕಂದಾಯ ಭೂಮಿ ಅಂಚಿನಲ್ಲಿ ಅರಣ್ಯ ಇಲಾಖೆ ಕೆರೆಗಳಿದ್ದಲ್ಲಿ ಹೂಳೆತ್ತುವಾಗ ಅಲ್ಲಿನ ಮಣ್ಣನ್ನು ರೈತರ ಹೊಲ, ತೋಟಗಳಿಗೆ ತೆಗೆದುಕೊಂಡು ಹೋಗಲು ಅವಕಾಶ ಕಲ್ಪಿಸಲಾಗುತ್ತದೆ.

ಈಗಿರುವ ಕೆರೆಗಳ ಜೊತೆಗೆ ಹೊಸದಾಗಿ ಕೆರೆಗಳ ನಿರ್ಮಾಣ ಮಾಡಲು ಜಲಸಂಪನ್ಮೂಲ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಅರಣ್ಯ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆ, ನಗರಾಭಿವೃದ್ದಿ ಪ್ರಾಧಿಕಾರದಿಂದ ಯೋಜನೆ ತಯಾರಿಸಬೇಕು. 10 ಎಕರೆಗಿಂತ ಹೆಚ್ಚು ಭೂ ಪರಿವರ್ತನೆಯಾಗಿ ನಿವೇಶನಗಳನ್ನು ನಿರ್ಮಾಣ ಮಾಡುವ ಬಡಾವಣೆಗಳಲ್ಲಿ ಲಭ್ಯವಾಗುವ ಸಿಎ ಸೈಟ್‌ಗಳಲ್ಲಿ ಸಣ್ಣ ಸಣ್ಣ ಕೆರೆಗಳ ನಿರ್ಮಾಣ ಮಾಡಬೇಕು.

ಜಲಾನಯನ ಅಭಿವೃದ್ದಿ; ಮಳೆಗಾಲದಲ್ಲಿ ಜಲಾನಯನ ಅಭಿವೃದ್ದಿ ಮಾಡಲು ನೀರನ್ನು ನಿಲ್ಲಿಸಿ, ಇಂಗಿಸಿ ಅಂತರ್ಜಲ ಹೆಚ್ಚಳ ಮಾಡಲು ಗೋಕಟ್ಟೆ, ಪಿಕಪ್, ನಿರ್ಮಾಣ ಮಾಡಬೇಕು ಮತ್ತು ಕೃಷಿ ಹೊಂಡಗಳ ನಿರ್ಮಾಣ, ಬದು ನಿರ್ಮಾಣ ಮಾಡಬೇಕು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಕಳೆದ ವರ್ಷ 140 ಅಮೃತ ಸರೋವರ, 112 ಮಳೆನೀರು ಕೊಯ್ಲು, 476 ರೈತರ ಜಮೀನಿನಲ್ಲಿ ಬದು ನಿರ್ಮಾಣ, ಕೊಳವೆಬಾವಿ ಪುನಶ್ಚೇತನ, ಈ ವರ್ಷ 304 ಹೊಸದಾಗಿ ಕೊಳವೆಬಾವಿ ಪುನಶ್ಚೇತನ ಕಾಮಗಾರಿ, 350 ಕೃಷಿ ಹೊಂಡ, ಗ್ರಾಮಗಳಲ್ಲಿ ಉಪಯೋಗಿಸಿದ ನೀರು ಇಂಗಿಸಲು ಇಂಗುಗುಂಡಿಗಳ ನಿರ್ಮಾಣವನ್ನು ಖಾತರಿ ಮತ್ತು ಅಟಲ್ ಭೂ ಜಲ ಯೋಜನೆಯಡಿ 24 ಗ್ರಾಮ ಪಂಚಾಯಿತಿಗಳಲ್ಲಿ ಕೈಗೊಳ್ಳಲಾಗಿದೆ. ಈ ವರ್ಷ ಇನ್ನೂ ಹೆಚ್ಚಿನ ಜಲಸಂರಕ್ಷಣಾ ಕಾಮಗಾರಿಗಳನ್ನು ನರೇಗಾದಡಿ ಕೈಗೊಳ್ಳಲಾಗುತ್ತದೆ ಎಂದರು.

ಮನೆಗಳಲ್ಲಿ ಮಳೆನೀರು ಕೊಯ್ಲು; ಹೊಸದಾಗಿ ಮನೆ ನಿರ್ಮಾಣ ಮಾಡುವಾಗ ಪರವಾನಗಿ ಪಡೆಯುವ ಸಂದರ್ಭದಲ್ಲಿ ಮಳೆನೀರು ಕೊಯ್ಲು ಮಾಡುವ ಷರತ್ತಿನೊಂದಿಗೆ ಅನುಮತಿ ನೀಡಲಿದ್ದು ಇದು ಕಡ್ಡಾಯವಾಗಿದ್ದರೂ ಅನೇಕರು ಅಳವಡಿಸಿಕೊಳ್ಳದಿರುವುದನ್ನು ಗಮನಿಸಲಾಗಿದೆ. ಸ್ಥಳೀಯ ಸಂಸ್ಥೆಗಳು ಇದನ್ನು ಅನುಷ್ಠಾನ ಮಾಡಲು ಮುಂದಾಗಬೇಕು ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿಯು ಪಂಚಾಯಿತಿಗಳಿಂದ ಮನೆ ಲೈಸೆನ್ಸ್ ನೀಡುವ ವೇಳೆ ಮಳೆನೀರು ಕೊಯ್ಲು ಅಳವಡಿಕೆ ಷರತ್ತಿನೊಂದಿಗೆ ಲೈಸೆನ್ಸ್ ನೀಡಲು ಮುಂದಾಗಲು ತಿಳಿಸಿದರು.

ಅರಣ್ಯಕ್ಕೆ ಒತ್ತು; ಸಾಮಾಜಿಕ ಅರಣ್ಯ ಹಾಗೂ ಪ್ರಾದೇಶಿಕ ಅರಣ್ಯ ಇಲಾಖೆಯಿಂದ ಮಳೆಗಾಲದಲ್ಲಿ ಹೆಚ್ಚು ಸಸಿಗಳನ್ನು ನೆಡಲು ಮುಂದಾಗಬೇಕು. ಸೆಪ್ಟೆಂಬರ್‌ವರೆಗೂ ಮಳೆಯಾಗಲಿದ್ದು ಜೂನ್, ಜುಲೈನಲ್ಲಿ ಸಸಿಗಳನ್ನು ನೆಟ್ಟಲ್ಲಿ ಬೇರುಬಿಟ್ಟು ಬೇಸಿಗೆ ಬರುವಷ್ಟರಲ್ಲಿ ಬೆಳವಣಿಗೆಯಾಗಲಿವೆ. ಸರ್ಕಾರಿ ಜಾಗ, ಕೈಗಾರಿಕೆ ಪ್ರದೇಶಗಳು, ಕಾಲುವೆಗಳಿಗೆ ಸ್ವಾಧೀನವಾಗಿರುವ ಜಮೀನಿನ ಅಂಚಿನಲ್ಲಿ, ಶಾಲಾ, ಕಾಲೇಜಿನ ಆವರಣ, ರಸ್ತೆ ಬದಿಯಲ್ಲಿ ಸಸಿಗಳನ್ನು ನೆಡಬೇಕು.

ಪ್ರವಾಸಿ ವನಾಭಿವೃದ್ದಿ; ವಿವಿಧ ಜಾತಿಗಳ ಗಿಡ, ಮರಗಳು, ವಿಶೇಷವಾದ ಗಿಡಗಳನ್ನು ಬೆಳೆಸುವ ಮೂಲಕ ಪ್ರವಾಸಿ ವನವನ್ನು ಅಭಿವೃದ್ದಿಪಡಿಸುವುದರಿಂದ ಮಕ್ಕಳಲ್ಲಿ ಮರಗಿಡಗಳ ಬಗ್ಗೆ ಆಸಕ್ತಿ ಮೂಡಿಸಬಹುದಾಗಿದೆ. ಶಾಲಾ, ಕಾಲೇಜುಗಳಿಂದ ಮಕ್ಕಳನ್ನು ಕರೆತಂದು ಜಾಗೃತಿ ಮೂಡಿಸಬಹುದಾಗಿದೆ. ಇದಕ್ಕಾಗಿ ಚಿನ್ನರ ವನಾಭಿವೃದ್ದಿಗೆ ಮುಂದಾಗಲು ತಿಳಿಸಿದರು.

ಅಂಗನವಾಡಿ, ಶಾಲಾ ಆವರಣದಲ್ಲಿ ಹಣ್ಣು, ತರಕಾರಿ; ಅಂಗನವಾಡಿ ಮತ್ತು ಶಾಲಾ ಆವರಣದಲ್ಲಿ ಹಣ್ಣು, ತರಕಾರಿ ಗಿಡಗಳನ್ನು ಬೆಳೆಸಬೇಕು. ಇಲ್ಲಿನುಗ್ಗೆ, ಹಲಸು, ತೆಂಗು, ಕರಿಬೇವು ಬೆಳೆಸುವುದರಿಂದ ಅಲ್ಲಿನ ಮಕ್ಕಳಿಗೆ ಬಿಸಿಯೂಟಕ್ಕೆ ಅನುಕೂಲವಾಗಲಿದೆ. ಜೊತೆಗೆ ಶಾಲಾ ಆವರಣದ ಪರಿಸರ ಚನ್ನಾಗಿರುತ್ತದೆ ಎಂದು ಜಿಲ್ಲಾಧಿಕಾರಿಯವರು ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಸ್ಮಾರ್ಟ್‌ಸಿಟಿನಿಂದ ಸಿಟಿಯಲ್ಲಿನ ಮರಗಿಡಗಳ ಅಂಕಿಅಂಶ; ದಾವಣಗೆರೆ ಸ್ಮಾರ್ಟ್‌ಸಿಟಿಯಾಗಿದ್ದು ಇಲ್ಲಿ 6.80 ಲಕ್ಷಕ್ಕಿಂತ ಹೆಚ್ಚು ಜನಸಂಖ್ಯೆ ಇದೆ ಎಂದು ಅಂದಾಜಿಸಲಾಗಿದೆ. ಆದರೆ ಇಲ್ಲಿನ ಜನಸಾಂದ್ರತೆಗೆ ತಕ್ಕಂತೆ ಮರಗಿಡಗಳ ಲೆಕ್ಕವೆಷ್ಟು ಎಂದು ಅಂಕಿಅಂಶಗಳನ್ನು ಸ್ಮಾರ್ಟ್‌ಸಿಟಿಯಿಂದ ಸಂಗ್ರಹಿಸಬೇಕು. ನಗರದಲ್ಲಿ ಸಿಮೆಂಟ್ ರಸ್ತೆಗಳು ಹೆಚ್ಚಾಗಿರುವುದರಿಂದ ಬೇಸಿಗೆಯಲ್ಲಿ ಹೆಚ್ಚಿನ ತಾಪಮಾನ ಇರುತ್ತದೆ. ತಾಪಮಾನ ತಗ್ಗಿಸಲು ಹೆಚ್ಚೆಚ್ಚು ಮರಗಿಡಗಳನ್ನು ಬೆಳೆಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಅಂಕಿ ಅಂಶಗಳನ್ನು ಸಂಗ್ರಹಿಸಲು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ರೈತರಮುಖಂಡರಾದ ಮಲ್ಲೂರು ರವಿಕುಮಾರ್, ಧರ್ಮಸ್ಥಳ ಗ್ರಾಮಾಭಿವೃದ್ದಿ ಸಂಘದ ಶ್ರೀನಿವಾಸ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

## ಯೋಗ ಅಭ್ಯಾಸ ಪ್ರತಿನಿತ್ಯವೂ ಅಳವಡಿಸಿಕೊಳ್ಳುವುದು ಮುಖ್ಯ

» ಹೊಸದುರ್ಗ



ಎಲ್ಲಾ ವಯಸ್ಸಿನವರೆಗೂ ಯೋಗ ಅತ್ಯವಶ್ಯಕ, ಸದೃಢ ಆರೋಗ್ಯಕ್ಕಾಗಿ ಎಲ್ಲರೂ ಯೋಗವನ್ನು ಮಾಡಲೇಬೇಕು. ಯೋಗ ನಮ್ಮ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ ಉತ್ತಮ ಆರೋಗ್ಯಕ್ಕೆ ಉತ್ತಮ ಆರೋಗ್ಯಕ್ಕಾಗಿ ಯೋಗ ಅಭ್ಯಾಸ ಪ್ರತಿನಿತ್ಯವೂ ಅಳವಡಿಸಿಕೊಳ್ಳುವುದು ಎಂದು ಸರ್ಕಾರಿ ಆಯುರ್ವೇದಿಕ್ ಆಸ್ಪತ್ರೆಯ ಕಂಗುವಳ್ಳಿ ಯೋಗ ಶಿಕ್ಷಕಿ ಅರುಣಕುಮಾರಿ ಕರೆ ನೀಡಿದರು.

ಪಟ್ಟಣದ ಸದ್ಗರು ಆಯುರ್ವೇದ ಕಂಪನಿಯ ಆವರಣದಲ್ಲಿಕಂಪನಿಯಕಾರ್ಮಿಕರಿಗೆಬುಧವಾರ ಸಂಜೆ ಆಯೋಜಿಸಲಾಗಿದ್ದ ಯೋಗಾಭ್ಯಾಸ ಮತ್ತು ಯೋಗಪಾಠ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಯೋಗದಿಂದ ಆರೋಗ್ಯದ ಯೋಗ್ಯತೆಯನ್ನ ಕಾಪಾಡಿಕೊಳ್ಳಬಹುದು. ಮಾನವನ ಆಂತರಿಕ ಮತ್ತು ಬಾಹ್ಯ ಸೌಂದರ್ಯಕ್ಕೆ ಯೋಗ ಅತ್ಯಂತ ಪರಿಣಾಮಕಾರಿ ಯೋಗದಿಂದ ಸೌಂದರ್ಯ ವೃದ್ಧಿಯಾಗುತ್ತದೆ ಎಂದರು.

ಸದ್ಗುರು ಆಯುರ್ವೇದ ಕಂಪನಿಯ ಸಿಇಒ ಡಾ. ಸ್ವಾತಿ ಪ್ರದೀಪ್ ಮಾತನಾಡಿ ಯೋಗ ನಮ್ಮ ಮಾನಸಿಕಒತ್ತಡವನ್ನುಕಡಿಮೆಮಾಡುತ್ತದೆ.ಯೋಗ ಮಾಡುವುದರಿಂದ ಪ್ರತಿನಿತ್ಯ ನಾವು ಮಾಡುವ ಕೆಲಸಗಳಲ್ಲಿ ಏಕಾಗ್ರತೆ ಸಿಗುತ್ತದೆ. ಯೋಗವನ್ನು ಎಲ್ಲಾ ವಯಸ್ಸಿನವರು ಮಾಡಬಹುದು ಕೇವಲ ಯೋಗ ಪ್ರಾಣಯಾಮದಿಂದ ದೇಹವನ್ನು ಮತ್ತು ಮನಸ್ಸನ್ನು ಸದೃಢ ಮಾಡಿಕೊಳ್ಳಬಹುದು ಎಂದು ತಿಳಿಸಿದರು.



ಚಳ್ಳಕೆರೆ ನಗರದ ಸುಧಾಕರ ಕ್ರೀಡಾಂಗಣದ ಮುಂಭಾಗದಲ್ಲಿ ಚಳ್ಳಕೆರೆ ಪತಂಜಲಿ ಯೋಗ ಶಿಕ್ಷಣ ಸಮಿತಿ ತಮ್ಮ 10ನೇ ಅಂತರಾಷ್ಟ್ರೀಯ ಯೋಗದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಮೋಟಾರ್ ಬೈಕ್ ರ್‍ಯಾಲಿ ನಡೆಸಿದರು.

## ವೈಜ್ಞಾನಿಕ ಕೃಷಿಯಿಂದ ಗ್ರಾಮೀಣ ಪ್ರದೇಶದ ರೈತರಿಗೆ, ಕೃಷಿಕರಿಗೆ ಉತ್ತಮ ಆದಾಯ ಸಾಧ್ಯ; ಸಿಇಓ



» ದಾವಣಗೆರೆ

ವೈಜ್ಞಾನಿಕ ಕೃಷಿಯಿಂದ ಗ್ರಾಮೀಣ ಪ್ರದೇಶದ ರೈತರಿಗೆ, ಕೃಷಿಕರಿಗೆ ಉತ್ತಮ ಆದಾಯ ಬರಲು ಸಾಧ್ಯ ಎಂದು ಸಿಇಓ ಸುರೇಶ್ ಬಿ. ಇಟ್ನಾಳ್ ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮೀನುಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಜಿಲ್ಲಾ ಪಂಚಾಯತ್ ಸಂಭಾಂಗಣದಲ್ಲಿ ಹಮ್ಮಿಕೋಳ್ಳಲಾಗಿದ್ದ ಸ್ವ-ಸಹಾಯ ಸಂಘದ ಮಹಿಳೆಯರಿಗೆ ಮತ್ತು ಮೀನು ಕೃಷಿಕರಿಗೆ ಮೀನು ಸಾಕಾಣಿಕೆಯ ಕುರಿತು ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ತೋಟಗಾರಿಕೆ, ರೇಷ್ಮೆ ಮತ್ತು ಪಶುಸಂಗೋಪನಾ ಇಲಾಖೆ, ಮೀನುಗಾರಿಕೆ, ಕೃಷಿ ಇಲಾಖೆಗಳು ಗ್ರಾಮೀಣ ಪ್ರದೇಶದ ರೈತರಿಗೆ, ಕೃಷಿಕರಿಗೆ ತುಂಬಾ ಹತ್ತಿರವಾದಂತಹ ಇಲಾಖೆಗಳಾಗಿವೆ. ಆದ್ದರಿಂದ ಜನರು ಇಂತಹ ಇಲಾಖೆಗಳನ್ನು ಸಂಪರ್ಕಿಸಿ, ಸರ್ಕಾರದ ಯೋಜನೆಗಳನ್ನು ತಿಳಿದುಕೊಳ್ಳುವ ಮೂಲಕ ಯೋಜನೆಗಳ ಲಾಭ ಪಡೆದು ವೈಜ್ಞಾನಿಕವಾಗಿ ತಮ್ಮ ಆದಾಯ ಹೆಚ್ಚಿಸಿಕೊಳ್ಳಬಹುದಲ್ಲದೆ ಗ್ರಾಮ ಪಂಚಾಯತಿಗಳ ಆದಾಯವನ್ನು ಹೇಗೆ ಹೆಚ್ಚಿಗೆ ಮಾಡಿಕೊಳ್ಳಬಹುದೆಂದು ತಿಳಿಸಿದರು. ಮೀನುಗಾರಿಕೆ ಉಪನಿರ್ದೇಶಕರಾದ ಶ್ರೀನಿವಾಸ್ ಕುಲಕರ್ಣಿ ಪ್ರಸ್ತಾವಿಕ ನುಡಿಗಳನ್ನಾಡಿದರು.

---

## ಪ್ರಮುಖ ಸುದ್ದಿ

ಹೈಸ್ಕೂಲ್ ಮೈದಾನದಲ್ಲಿ 5 ರಿಂದ 6 ಸಾವಿರ ಯೋಗಪಟುಗಳ ಭಾಗಿಯಾಗುವ ನಿರೀಕ್ಷೆ; ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ

# ಜೂನ್ 21 ರಂದು 10 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

» ದಾವಣಗೆರೆ



ಸ್ವಂತ ಮತ್ತು ಸಮಾಜಕ್ಕಾಗಿ ಯೋಗ ಎಂಬ ಘೋಷವಾಕ್ಯದಡಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಹೈಸ್ಕೂಲ್ ಮೈದಾನದಲ್ಲಿ ಆಚರಿಸಲಾಗುತ್ತಿದ್ದು 5 ರಿಂದ 6 ಸಾವಿರ ಜನರು ಭಾಗಿಯಾಗಿ ಯೋಗಾಸನ ಮಾಡುವ ನಿರೀಕ್ಷೆ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಯೋಗ ದಿನಾಚರಣೆ ಕುರಿತು ಮಾಹಿತಿ ನೀಡಲು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನವನ್ನು 195 ದೇಶಗಳಲ್ಲಿ ಆಚರಿಸಲಾಗುತ್ತಿದೆ. ಈ ದಿನ ಪ್ರಕಾಶಮಾನದ ಸಮಯ ಹೆಚ್ಚಾಗಲಿದ್ದು ಹಗಲು ಹೆಚ್ಚು ರಾತ್ರಿ ಕಡಿಮೆಯಾಗುವ ದಿನ ಇದಾಗಿದ್ದು ಹೆಚ್ಚು ಅವಧಿಯಲ್ಲಿ ಪ್ರಕಾಶಮಾನವಾಗಿರಲು ಈ ದಿನವನ್ನು ಅಂತರಾಷ್ಟ್ರೀಯ ಯೋಗ ದಿನವನ್ನಾಗಿ ಘೋಷಣೆ ಮಾಡಲಾಗಿದೆ ಎಂದರು.

ಯೋಗ ಎಂಬುದು ಭಾರತದ ಪ್ರಾಚೀನ, ಪಾರಂಪರಿಕ, ಆಧ್ಯಾತ್ಮಿಕ ಪದ್ಧತಿಯಾಗಿದ್ದು ಇದರಿಂದ ಭೌದ್ಧಿಕ ಅಭಿವೃದ್ದಿ, ಮಾನಸಿಕ ಸಮತೋಲನ, ಸಮಚಿತ್ತತೆಕಾಪಾಡಲುಸಹಕಾರಿಯಾಗಿದ್ದು ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರು ಯೋಗಾಭ್ಯಾಸದಲ್ಲಿ ತೊಡಗಿಕೊಳ್ಳಬೇಕೆಂದು ಮತ್ತು ಈ ಬಗ್ಗೆ ಹೆಚ್ಚು ಜಾಗೃತಿ ಮೂಡಿಸುವುದು ಯೋಗ ದಿನದ ಪ್ರಮುಖ ಉದ್ದೇಶವಾಗಿದೆ ಎಂದರು. ದಾವಣಗೆರೆ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಕಾರ್ಯಕ್ರಮ ನಡೆಯಲಿದ್ದು ಜಿಲ್ಲಾ ಮಟ್ಟದ ಕಾರ್ಯಕ್ರಮ ನಗರದ ಹೈಸ್ಕೂಲ್ ಮೈದಾನದಲ್ಲಿ ಜೂನ್ 21 ರಂದು ಬೆಳಗ್ಗೆ 5.30 ರಿಂದ ಧ್ಯಾನದೊಂದಿಗೆ ಆರಂಭವಾಗಲಿದೆ. ಬೆಳಗ್ಗೆ 6.30 ರಿಂದ 7 ರವರೆಗೆ ಕಾರ್ಯಕ್ರಮದ ಉದ್ಘಾಟನೆ ಮತ್ತು ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸಾಮಾನ್ಯ ಯೋಗ ಶಿಷ್ಟಾಚಾರ ಬೆ.7 ರಿಂದ 7.45 ರವರೆಗೆ ನಡೆಯಲಿದೆ.

ಯೋಗ ದಿನಾಚರಣೆಯನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳು, ತಪೋವನ ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ ಮೆಡಿಕಲ್ ಕಾಲೇಜು, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜು, ಎನ್.ಸಿ.ಸಿ, ಎನ್.ಎಸ್.ಎಸ್, ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾನಿಲಯ, ಪತಂಜಲಿ ಯೋಗ ಶಿಕ್ಷಣ ಸಮಿತಿ, ಪತಂಜಲಿ ಯೋಗ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಆಯುಷ್ ಅಧಿಕಾರಿ ಡಾ; ಯೋಗೇಂದ್ರಕುಮಾರ್ ಬಿ.ಯು, ಯೋಗ ಒಕ್ಕೂಟದ ಅಧ್ಯಕ್ಷ ವಾಸುದೇವ ರಾಯ್ಕರ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕರ್ನಾಟಕ ಮಾಧ್ಯಮ ಮಹಾಒಕ್ಕೂಟದ ಜಿಲ್ಲಾಧ್ಯಕ್ಷರಾಗಿ ಜೀಯಾವುಲ್ಲಾ ಆಯ್ಕೆ.



» **ಚಳ್ಳಕೆರೆ**

ಕರ್ನಾಟಕ ಮಾಧ್ಯಮ ಮಹಾಒಕ್ಕೂಟದ ನೂತನ ಜಿಲ್ಲಾಧ್ಯಕ್ಷರಾಗಿ ಮೊಳಕಾಲ್ಮೂರಿನ ಜೀಯಾವುಲ್ಲಾ ಆಯ್ಕೆಯಾಗಿದ್ದಾರೆಂದು ಮಾಧ್ಯಮ ಮಹಾಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಶಿವಕುಮಾರ್ ತಿಳಿಸಿದರು. ಅವರು, ಬುಧವಾರ ನಗರದ ಪ್ರವಾಸಿಮಂದಿರದಲ್ಲಿ ಮಾಧ್ಯಮ ಮಹಾಒಕ್ಕೂಟದ ಪದಾಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾಧ್ಯಮ ಒಕ್ಕೂಟವನ್ನು ಬಲಗೊಳಿಸುವ ನಿಟ್ಟಿನಲ್ಲಿ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಕೆಲವೊಂದು ಆಯ್ಕೆ ಮಾಡಲು ಸಭೆ ಕರೆಯಲಾಗಿದೆ. ಎಲ್ಲರ ಅಭಿಪ್ರಾಯ ಪಡೆದು ಮೊಳಕಾಲ್ಮೂರಿನ ಯುವಕ, ಪತ್ರಿಕಾ ಕ್ಷೇತ್ರದ ಬಗ್ಗೆ ಸಾಕಷ್ಟು ಅನುಭವ, ವಿಶ್ವಾಸ ಹೊಂದಿರುವ ಜೀಯಾವುಲ್ಲಾರವರನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು, ಜಿಲ್ಲೆಯಲ್ಲಿ ಮಾಧ್ಯಮ ಮಹಾಒಕ್ಕೂಟವನ್ನು ಬಲವಾಗಿ ಸಂಘಟಿಸಬೇಕಲ್ಲದೆ, ಜಿಲ್ಲೆಯ ಯಾವುದೇ ಪ್ರದೇಶದಲ್ಲಿ ಪತ್ರಕರ್ತರಿಗೆ ಸಮಸ್ಯೆ ಉಂಟಾದಲ್ಲಿ ಸ್ಪಂದಿಸುವಂತೆ ಸೂಚನೆ ನೀಡಿದರು. ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಸಂದರ್ಭದಲ್ಲಿ ಮಾತನಾಡಿದ ಜೀಯಾವುಲ್ಲಾ, ಜಿಲ್ಲಾ ಮಟ್ಟದಲ್ಲಿ ನನಗೆ ಅಧ್ಯಕ್ಷ ಸ್ಥಾನ ನೀಡಿದ ರಾಜ್ಯಾಧ್ಯಕ್ಷ ಹಾಗೂ ಪದಾಧಿಕಾರಿಗಳಿಗೆ ನಾನು ಅಭಾರಿಯಾಗಿದ್ದೇನೆ. ಪತ್ರಿಕಾರಂಗದ ಹಲವಾರು ಸಮಸ್ಯೆಗಳ ಬಗ್ಗೆ ನಿಮ್ಮೆಲ್ಲರ ಮಾರ್ಗದರ್ಶನ ಪಡೆದು ಅವುಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸುವೆ ಎಂದರು. ರಾಜ್ಯಪ್ರಧಾನಕಾರ್ಯದರ್ಶಿ ಡಿ.ಈಶ್ವರಪ್ಪ ಮಾತನಾಡಿದರು. ರಾಜ್ಯಾಧ್ಯಕ್ಷರ ಸೂಚನೆ ಮೇರೆಗೆ ಜಿಲ್ಲಾ ಪ್ರಧಾನಕಾರ್ಯದರ್ಶಿಯಾಗಿ ಓಬಳೇಶ್, ಉಪಾಧ್ಯಕ್ಷರಾಗಿ ಕೆ.ರುದ್ರಮುನಿ, ಗ್ರಾಮಾಂತರ ಉಪಾಧ್ಯಕ್ಷರಾಗಿ ಜಿ.ಎನ್. ಜಯರಾಂ, ಖಜಾಂಚಿಯಾಗಿ ಎಚ್. ರಾಜಪ್ಪ, ಜಿಲ್ಲಾ ಸದಸ್ಯರಾಗಿ ಆನಂದಮೂರ್ತಿ, ಅನಿಲ್‌ಕುಮಾರ್, ಪರಮೇಶ್ವರನಾಯ್ಕ ಇವರನ್ನು ಆಯ್ಕೆ ಮಾಡಲಾಗಿದೆ ಎಂದರು.

# ಮೊಬೈಲ್ ಗೀಳು ಮಕ್ಕಳ ಪ್ರತಿಭೆಗೆ ಹಾನಿಕಾರಕ

» **ಚಿತ್ರದುರ್ಗ**

ಮಕ್ಕಳಲ್ಲಿನ ಮೊಬೈಲ್ ಗೀಳು ಆರೋಗ್ಯಕ್ಕೆ ಪ್ರತಿಭೆಗೆ ಹಾನಿಕರಾಕ ಸಾಧ್ಯವಾದಷ್ಟು ಅದನ್ನು ಬಳಸದೇ ದೂರ ವಿರುವಂತೆ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಎಸ್.ಜೆ. ಕುಮಾರಸ್ವಾಮಿ ವಿದ್ಯಾರ್ಥಿಗಳಿಗೆ ಕಿವಿ ಮಾತು ನೀಡಿದರು.

ನಗರದವಿದ್ಯಾವಿಕಾಸವಿದ್ಯಾಸಂಸ್ಥೆಯಲ್ಲಿ ಬುಧವಾರ ನಡೆದ ಶಾಲಾ ಮಟ್ಟದ ಹೌಸ್‌ಗಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಕ್ಕಳ ಪ್ರತಿಭೆಯನ್ನು ಗುರುತಿಸಲು ಹೌಸ್‌ಗಳು ಸಹಾಯಕ. ಮೊಬೈಲ್ ಗೀಳು ಆರೋಗ್ಯಕ್ಕೆ ಪ್ರತಿಭೆಗೆ ಹಾನಿಕರ ಎಂದು ಕಿವಿ ಮಾತು ನೀಡಿದರು. ಒನಕೆ ಓಬವ್ವಳ ಸಾಹಸ ಗಾಥೆಯನ್ನು ಸ್ಮರಿಸಿದರು. ಶಿಸ್ತಿನಿಂದ ಇದ್ದರೆ ನಿಮ್ಮ ಗುರಿ ಸಾಧಿಸಲು ಅವಕಾಶವಾಗುತ್ತದೆ ಎಂದರು. ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ಚೆನ್ನಾಗಿ ನಿಭಾಯಿಸಿ ಎಂದು ಮಕ್ಕಳಿಗೆ ಉತ್ತೇಜನಕಾರಿ ಮಾತುಗಳನ್ನು ಆಡಿದರು.



ಸಂಸ್ಥೆಯ ಕಾರ್ಯದರ್ಶಿಗಳಾದ ಬಿ.ವಿಜಯ್ ಕುಮಾರ್ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಕ್ಕಳ ಅಭಿವೃದ್ಧಿಗೆ ಹೌಸ್‌ಗಳ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಎಸ್.ಎಂ ಪೃಥ್ವೀಶ, ಶ್ರೀಮತಿ ಸುನೀತಾ ವಿಜಯ್‌ಕುಮಾರ್, ಮುಖ್ಯೋಪಾಧ್ಯಾಯರಾದ ತಿಪ್ಪೇಸ್ವಾಮಿ ಎನ್.ಜಿ ಐಸಿಎಸ್‌ಸಿ ಪ್ರಾಚಾರ್ಯರಾದ ಬಸವರಾಜಯ್ಯಪಿ.ಉಪಪ್ರಾಚಾರ್ಯರಾದ ಅವಿನಾಶ್.ಬಿ. ಶಿಕ್ಷಕ/ಶಿಕ್ಷಕೇತರ ವೃಂದ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮಕ್ಕಳ ಸರ್ವತೋಮುಖ ಅಭಿವೃದ್ಧಿಯ ದೃಷ್ಟಿಯಿಂದ ಶೈಕ್ಷಣಿಕವಾಗಿ, ಕ್ರೀಡೆ ಮತ್ತು ಸಾಂಸ್ಕೃತಿಕವಾಗಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಪದ್ಮಶ್ರೀ, ಪದ್ಮವಿಭೂಷಣ, ಪದ್ಮಭೂಷಣ, ಭಾರತ ರತ್ನ ಎಂಬ ನಾಲ್ಕು ಹೌಸ್‌ಗಳನ್ನು ರಚಿಸಲಾಯಿತು.

ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ಜುಹಾ ಸಾರಾ, ಸ್ವಾಗತಿಸಿದರು, ವರ್ಷಿತಾ ವಂದಿಸಿದರೆ ಸನಿಹಾ ಸಿಂಚನ ನಿರೂಪಿಸಿದರು.

# ಯೋಗ ದಿನ: ಶಿವಯೋಗಿ ಮಂದಿರದಲ್ಲಿ ತರಬೇತಿ

» **ದಾವಣಗೆರೆ**

ನಗರದ ಶಿವಯೋಗಿ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆಯುಷ ಇಲಾಖೆ, ಜಿಲ್ಲಾ ಯೋಗ ಒಕ್ಕೂಟ ಇವರ ಸಹಯೋಗದಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನದ ಪ್ರಯುಕ್ತ ಯೋಗ ತರಬೇತಿ ಶಿಬಿರವನ್ನು ಸಾರ್ವಜನಿಕರಿಗೆ ಉಚಿತವಾಗಿ ಹಮ್ಮಿಕೊಳ್ಳಲಾಗಿತ್ತು.

ಶ್ರೀ ಬಸವ ಪ್ರಭು ಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಯೋಗದ ಮಹತ್ವವನ್ನು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಆಯುಷ ಅಧಿಕಾರಿಗಳಾದ ಡಾ. ಯೋಗೇಂದ್ರಕುಮಾರ್.ಬಿ ಯು. ಪ್ರಾಸ್ತಾವಿಕವಾಗಿ ಮಾತನಾಡಿಆಯುಷಪದ್ಧತಿಯಪ್ರಯೋಜನಗಳು ಹಾಗೂಯೋಗದಿಂದಾಗುವಪ್ರಯೋಜನಗಳನ್ನು ಸಾರ್ವಜನಿಕರಿಗೆ ತಿಳಿಸಿದರು.

ಯೋಗ ಒಕ್ಕೂಟದ ಅಧ್ಯಕ್ಷರಾದ ವಾಸುದೇವ ರಾಯ್ಕರ್ ಆಯುಷ್ ಇಲಾಖೆಯ ಜೊತೆಗೂಡಿ ಕಳೆದ 10 ವರ್ಷಗಳಿಂದಲೂ ಅಂತರಾಷ್ಟ್ರೀಯ ಯೋಗದಿನ ಆಚರಿಸುತ್ತಾ ಬಂದಿದ್ದು ಈ ವರ್ಷವೂ ಜೊತೆಗೂಡಿ 10ನೇ ಅಂತರಾಷ್ಟ್ರೀಯ ಯೋಗದಿನವನ್ನು ಅರ್ಥಪೂರ್ಣವಾಗಿ



ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಯೋಗ ಪ್ರಾತ್ಯಕ್ಷಿತೆಯನ್ನು ಯೋಗಪಟು ಚನ್ನಬಸವಣ್ಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಸುಮಾರು 600ಕ್ಕೂಹೆಚ್ಚುಸಾರ್ವಜನಿಕರುಭಾಗವಹಿಸಿದ್ದರು. ಯೋಗ ಒಕ್ಕೂಟದ ಪದಾಧಿಕಾರಿಗಳಾದ ಪರಶುರಾಮ್, ಕೀರ್ತಿರಾಜು, ಪ್ರಕಾಶ್ ವತ್ತಂಗಿ, ಮಾದೇಗೌಡ್ರು, ಅನಿಲ್ ರಾಯ್ಕರ್ ಹಾಗೂ ಇತರರು ಉಪಸ್ಥಿತರಿದ್ದರು.

## ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ಸಂದಾಯ

» **ದಾವಣಗೆರೆ**




ಸರ್ಕಾರದ ಮಹಾತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಐದನೇ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ಸಂದಾಯ ಮಾಡಲಾಗುತ್ತಿದೆ.

ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಮೊಬೈಲ್ ಮೂಲಕ ಅಥವಾ ಹತ್ತಿರದ ದಾವಣಗೆರೆ ಒನ್, ಗ್ರಾಮ ಒನ್ ಸೆಂಟರ್ ಗಳಲ್ಲಿ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕು. ಹಾಗೂ 2024 ರ ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳುಗಳ ಸ್ವಯಂ ದೃಢೀಕರಣ ಮಾಡಿಕೊಳ್ಳದಿರುವ ಫಲಾನುಭವಿಗಳಿಗೆ ಜೂ.25 ರೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T